ಸಂಪುಟ : 9 ಸಂಚಿಕೆ 220 ಪುಟ : 4 ಬೆಲೆ: 3.00 ಮಂಗಳವಾರ ಅಕ್ಟೋಬರ್ 8 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 220 Pages : 4 Price : 3.00 Tuesday October 8 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಯತ್ನಾಳ ವಿರುದ್ಧ ಹರಿಹಾಯ್ದ ಸಚಿವ ಜಮೀರ್

## ವಕ್ಫ್ ಆಸ್ತಿ ಯಾರಪ್ಪನ ಆಸ್ತಿ ಅಲ್ಲ

■ವಿಜಯಸಾಕ್ಷಿ ಸುದ್ದಿ, ವಿಜಯಪುರ

ವಕ್ಫ್ ಆಸ್ತಿ ದಾನ ಮಾಡಿರುವ ಆಸ್ತಿ. ಅದು ನಿಮ್ಮಪ್ಪನ ಆಸ್ತಿಯೂ ಅಲ್ಲ, ನಮ್ಮಪ್ಪನ ಆಸ್ತಿಯೂ ಅಲ್ಲ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ವಿರುದ್ಧ ಸಚಿವ ಜಮೀರ್ ಅಹ್ಮದ್ ಖಾನ್ ವಾಗ್ದಾಳಿ ನಡೆಸಿದ್ದಾರೆ.

ವಿಜಯಪುರದಲ್ಲಿ ಆಯೋಜಿಸಿದ್ದ ವಕ್ಫ್ ಅದಾಲತ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಕ್ಫ್ ಆಸ್ತಿಯಲ್ಲಿ ಒಂದಿಷ್ಟೂ ಸರಕಾರದ ಆಸ್ತಿ ಇಲ್ಲ. ಇದು ದಾನಿಗಳು ದಾನ ಮಾಡಿರುವ ಆಸ್ತಿ ಎಂದರು.

ವಕ್ಫ್ ಆಸ್ತಿ ಶಾಸಕ ಯತ್ನಾಳ ಅಪ್ಪನ ಆಸ್ತಿ ಅಲ್ಲ. ಹಾಗೆಯೇ ನಮ್ಮಪ್ಪನ ಆಸ್ತಿಯೂ ಅಲ್ಲ ಎಂದು ಕಿಡಿಕಾರಿದರು.

ನಮ್ಮ ಸಮಾಜಕ್ಕೆ ಒಳ್ಳೆಯದು ಆಗಲಿ ಎಂದು ದಾನ ಮಾಡಿರುವ ಆಸ್ತಿ. ಒಂದು ಇಂಚು ಸರಕಾರದ ಜಮೀನನ್ನು ತೆಗೆದುಕೊಂಡಿಲ್ಲ ಮಿಸ್ಟರ್ ಯತ್ನಾಳ ಎಂದು ಗುಡುಗಿದರು.

## ಎಸ್‌ಎಸ್‌ಕೆ ಸಮಾಜದಿಂದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಜಗದಂಬಾ ದೇವಿ ದೇವಸ್ಥಾನದಲ್ಲಿ ಎಸ್.ಎಸ್.ಕೆ ಸಮಾಜ ಹಾಗೂ ಎಸ್‌ಎಸ್‌ಕೆ ಹಿತರಕ್ಷಣಾ ಸಮಿತಿ ಸಹಯೋಗದಲ್ಲಿ 15ನೇ ವರ್ಷದ ಬಹುಮಾನ ವಿತರಣಾ ಸಮಾರಂಭ, ಧರ್ಮ ಜಾಗೃತಿ ಸಭೆ ನಡೆಯಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಶಿಕ್ಷಕಿ ಜಮುನಾಬಾಯಿ ಸುರೇಶ್ ಖೋಡೆ ಮಾತನಾಡಿ, ಮಕ್ಕಳ ಗುರಿ ಮುಟ್ಟಿಸುವಲ್ಲಿ ತಂದೆ-ತಾಯಿಗಳ ಪಾತ್ರ ಬಹಳ ಮಹತ್ವದ್ದಾಗಿದೆ. ಸಮಾಜದ ಬಾಂಧವರು ಶಿಕ್ಷಣಕ್ಕೆ ಹೆಚ್ಚಿನ ಮಹತ್ವವನ್ನು ಕೊಡಬೇಕು ಎಂದರು.

ಈ ವೇಳೆ ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ ಸೇರಿ ವಿವಿಧ ಪರೀಕ್ಷೆಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಬಳಿಕ ರಾಜ್ಯದಲ್ಲಿನ ಲವ್ ಜಿಹಾದ್ ಪ್ರಕರಣಗಳ ಜಾಗೃತಿಗಾಗಿ ಸಮಾಜದ ಯುವಕ-ಯುವತಿಯರಿಗೆ ಲವ್ ಜಿಹಾದ್ ವಿರುದ್ಧ ಪಂಚಟ್ರಸ್ಟ್ ಕಮಿಟಿಯ ಅಧ್ಯಕ್ಷ ವಿಶ್ವನಾಥಸಾ ಮೇಘರಾಜ್ ಅವರು, ನನ್ನ ಸನಾತನ ಹಿಂದೂ ಧರ್ಮದ ಎಸ್‌ಎಸ್‌ಕೆ ಸಮಾಜದ ಸಂಸ್ಕೃತಿ, ಸಂಸ್ಕಾರವನ್ನು ಉಳಿಸಿ ಬೆಳೆಸಿಕೊಂಡು ಹೋಗುತ್ತೇನೆ ಹಾಗೂ ಅನ್ಯ ಧರ್ಮದ ಯಾವುದೇ ಹಬ್ಬ ಆಚರಣೆಗಳನ್ನು ನಾನು ಆಚರಿಸುವುದಿಲ್ಲ ಎಂದು ಪ್ರಮಾಣ ಮಾಡುತ್ತೇನೆ. ನನಗೆ ಜನ್ಮ ನೀಡಿದ ತಂದೆ-ತಾಯಿಯ ಗೌರವಕ್ಕೆ ಧಕ್ಕೆ ಬರದಂತೆ ಅವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ನಾನು ನಡೆಯುತ್ತೇನೆ ಎಂದು ಪ್ರತಿಜ್ಞಾವಿಧಿ ಬೋಧಿಸಿದರು.

ಎಸ್‌ಎಸ್‌ಕೆ ಹಿತರಕ್ಷಣಾ ಸಮಾಜದ ಅಧ್ಯಕ್ಷ ಸುಭಾಸ ರಾಯಬಾಗಿ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ್ದರು. ಲಕ್ಷ್ಮಣ ರಂಗ್ರೇಜ, ಗಣೇಶ ರಾಯಬಾಗಿ, ನಾಗೇಶ ಶಿಂಗ್ರಿ, ಸರಸ್ವತಿಬಾಯಿ ಶಿಂಗ್ರಿ, ಶಾರದಾಬಾಯಿ ರಾಯಬಾಗಿ, ಸುರೇಶ ರಂಗ್ರೇಜ ಸೇರಿ ಎಸ್‌ಎಸ್‌ಕೆ ಪಂಚ ಟ್ರಸ್ಟ್ ಕಮಿಟಿ, ಹಿತರಕ್ಷಣಾ ಸಮಿತಿ, ತರುಣ ಸಂಘ ಹಾಗೂ ಗಾಯತ್ರೀದೇವಿ ಮಹಿಳಾ ಮಂಡಳದ ಸದಸ್ಯರು ಇದ್ದರು.

ಲೀಡ್ ಬ್ಯಾಂಕ್‌ನ ಸಲಹಾ ಸಮಿತಿ ಸಭೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ

# ಬಡಜನರ ಆರ್ಥಿಕ ಸ್ವಾವಲಂಬನೆಗೆ ನೆರವಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಡಜನರು ಆರ್ಥಿಕವಾಗಿ ಸ್ವಾವಲಂಬಿ ಬದುಕು ನಡೆಸಲು ಬ್ಯಾಂಕ್‌ಗಳು ಸಹಕಾರಿಯಾಗಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಜರುಗಿದ ಲೀಡ್ ಬ್ಯಾಂಕ್‌ನ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದಿಂದ ಜಾರಿಗೊಂಡಿರುವ ವಿವಿಧ ಜನಪರ ಯೋಜನೆಗಳ ಆರ್ಥಿಕ ಸೌಲಭ್ಯವನ್ನು ಬ್ಯಾಂಕ್‌ಗಳ ಮುಖಾಂತರ ನಿಗದಿತ ಕಾಲಮಿತಿಯಲ್ಲಿಯೇ ದೊರಕಿಸಿದರೆ ಫಲಾನುಭವಿಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ. ಬಡಜನರು ಹಾಗೂ ಯುವಕರು ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕ್‌ನವರ ಸೂಕ್ತ ಮಾರ್ಗದರ್ಶನ ಹಾಗೂ ಸಹಕಾರ ಅಗತ್ಯವಾಗಿದೆ. ಬ್ಯಾಂಕ್‌ಗಳ ವಿಶ್ವಾಸಾರ್ಹತೆ ಹೆಚ್ಚಾಗುವ ರೀತಿಯಲ್ಲಿ ಬ್ಯಾಂಕ್ ಅಧಿಕಾರಿ ಹಾಗೂ ಸಿಬ್ಬಂದಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ನಡೆದುಕೊಳ್ಳಬೇಕು. ಗದಗ ಜಿಲ್ಲೆ ಕೃಷಿ ಪ್ರಧಾನ ಜಿಲ್ಲೆಯಾಗಿದ್ದು, ರೈತರಿಗೆ ಸಾಲ ನೀಡುವಾಗ ವಿನಾ ಕಾರಣ ವಿಳಂಬ ಮಾಡಬಾರದು. ಜಿಲ್ಲೆಯಲ್ಲಿ ಕೈಮಗ್ಗ ಮತ್ತು ಜವಳಿ ಉದ್ದಿಮೆಗಳನ್ನು ಹೆಚ್ಚು ಪ್ರೋತ್ಸಾಹಿಸಬೇಕು. ಕೈಮಗ್ಗದ ಉದ್ದಿಮೆದಾರರ ಸಭೆ ಕೈಗೊಂಡು ಕೈಮಗ್ಗ ಮತ್ತು ಜವಳಿ ಉದ್ದಿಮೆಗಳ



ಪರಿಣಾಮಕಾರಿ ಅಭಿವೃದ್ಧಿಗಾಗಿ ಕ್ರಿಯಾಶೀಲರಾಗಿ ಕೆಲಸ ನಿರ್ವಹಿಸಬೇಕು. ಬ್ಯಾಂಕ್‌ನವರು ವಿಶೇಷ ಆಸಕ್ತಿಯಿಂದ ಕೆಲಸ ನಿರ್ವಹಿಸಿದರೆ ಯೊಜನೆಗಳ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲು ಸಾಧ್ಯವಾಗುತ್ತದೆ ಎಂದು ಸಂಸದರು ನಿರ್ದೇಶನ ನೀಡಿದರು.

ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್ ಎಂ.ವಿ ಮಾತನಾಡಿ, ಜಿಲ್ಲೆಯಲ್ಲಿ ಪ್ರಸಕ್ತ ವಾರ್ಷಿಕ ಸಾಲ ಯೋಜನೆಯಡಿ 30-6-2024ರವರೆಗೆ ಕೃಷಿ ಸೇರಿದಂತೆ ಆದ್ಯತಾ ವಲಯಕ್ಕೆ 120832.31 ಲಕ್ಷ ರೂ. ಸಾಲ ನೀಡಿಕೆಯಾಗಿದೆ. ತಾಲೂಕಾವಾರು ವಿವರ-(ಲಕ್ಷ ಗಳಲ್ಲಿ) ಗದಗ 55973.08, ಗಜೇಂದ್ರಗಡ-5934.98, ಲಕ್ಷ್ಮೇಶ್ವರ-5984.74, ಮುಂಡರಗಿ-9553.72, ನರಗುಂದ-15252.8, ರೋಣ-19416.65, ಶಿರಹಟ್ಟಿ-8716.34 ಸಾಲ ನೀಡಿಕೆಯಾಗಿದೆ ಎಂದು ವಿವರಿಸಿದರು.

ಜಿಲ್ಲೆಯಲ್ಲಿ 2024ರ ಜೂನ್ ಅಂತ್ಯದವರೆಗೆ ಮುದ್ರಾ ಸಾಲ ಯೋಜನೆಯ ಶಿಶು ಯೋಜನೆಯಲ್ಲಿ 50116 ಅರ್ಜಿಗಳನ್ನು ಸ್ವೀಕರಿಸಿ 10936.72 ಲಕ್ಷ ರೂ, ಕಿಶೋರ ಯೋಜನೆಯಡಿ 34032 ಅರ್ಜಿಗಳನ್ನು ಸ್ವೀಕರಿಸಿ 33850.85 ಲಕ್ಷ ರೂ. ಹಾಗೂ ತರುಣ ಯೋಜನೆಯಡಿ 1532 ಅರ್ಜಿಗಳನ್ನು ಸ್ವೀಕರಿಸಿ 9395.20 ಲಕ್ಷ ರೂ. ವಿತರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಉದ್ಯೋಗಿನಿ, ಪಿಎಂಇಜಿಪಿ (ಪ್ರೈಮ್ ಮಿನಿಸ್ಟರ್ ಎಂಪ್ಲಾಯಮೆಂಟ್ ಜನರೇಶನ್ ಪ್ರೋಗ್ರಾಮ್ ), ಪಿಎಂ ಸ್ವನಿಧಿ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶಿಲನೆ ನಡಸಲಾಯಿತು.

ಸಭೆಯಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ನಬಾರ್ಡ್‌ನ ಎಜಿಎಂ ಮಹಾದೇವ ಕೀರ್ತಿ, ಆರ್‌ಬಿಐನ ವೆಂಕಟರಾಮಯ್ಯ ಟಿ.ಎಸ್, ಎಸ್‌ಬಿಐನ ನಾಗಸುಬ್ಬಾರೆಡ್ಡಿ, ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಬ್ಯಾಂಕ್‌ಗಳ ಅಧಿಕಾರಿಗಳು ಹಾಜರಿದ್ದರು.

> ಜಿಲ್ಲೆಯಲ್ಲಿ ಲೀಡ್ ಬ್ಯಾಂಕ್‌ನ 182 ಶಾಖೆಗಳು ಕಾರ್ಯನಿರ್ವಹಿಸುತ್ತಿವೆ. ಹೆಚ್‌ಡಿಎಫ್‌ಸಿಯ ಹೊಸ ಶಾಖೆಗಳು ಜಿಲ್ಲೆಯ ಗಜೇಂದ್ರಗಡ, ಲಕ್ಷ್ಮೇಶ್ವರ, ಮುಂಡರಗಿ ಹಾಗೂ ನರಗುಂದದಲ್ಲಿ ತೆರೆಯಲಾಗಿದೆ. ಜಿಲ್ಲೆಯ ಸಾಲ ಠೇವಣಿ ಅನುಪಾತ ಶೇ.95.94 ಆಗಿರುತ್ತದೆ. ಎಲ್ಲ ಬ್ಯಾಂಕಿನ ನಿಯಂತ್ರಣಾಧಿಕಾರಿಗಳು ಸಾಲ ಠೇವಣಿ ಅನುಪಾತವನ್ನು ಸುಧಾರಿಸಲು ಶಾಖೆಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್ ಎಂ.ವಿ ಸಭೆಗೆ ವಿವರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಹಿರಿಯ ಮುಖಂಡ ಕಾಂತಿಲಾಲ್ ಬನ್ಸಾಲಿ ವಿಶ್ವಾಸ

# ಅನಿಲರಂತಹ ನಾಯಕರು ನಮಗೆ ಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಮುಖಂಡ ಅನಿಲ ಮೆಣಸಿನಕಾಯಿ ನಮ್ಮ ಗದುಗಿನ ಹೆಮ್ಮೆಯ ನಾಯಕರು. ಅವರು ನಗರಕ್ಕೆ ಆಗಮಿಸಿದರೆ ಸಾವಿರಾರು ಜನರು ಸೇರುತ್ತಾರೆ. ಅವರಂತಹ ನಾಯಕರು ನಮಗೆ ಬೇಕು. ಸಮಾನತೆಯ ನಾಯಕತ್ವ ಗುಣ ಅವರಲ್ಲಿದೆ. ಮುಂದೆ ಅವರು ಶಾಸಕರಾಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆಗುತ್ತಾರೆ. ಭ್ರಷ್ಟಾಚಾರ ಮುಕ್ತ ರಾಜಕಾರಣ ಗದಗದಲ್ಲಿ ಇರಬೇಕು. ಅಧಿಕಾರದಲ್ಲಿರುವರು ಮಕ್ಕಳನ್ನು ಬೆಳೆಸಬಾರದು. ಕಾರ್ಯಕರ್ತರನ್ನು ಬೆಳೆಸಬೇಕು. ಜಿಲ್ಲೆಯಲ್ಲಿ ಭ್ರಷ್ಟಾಚಾರ ಮುಕ್ತ ಆಡಳಿತ ನಡೆಸಲು ಅನಿಲ ಮೆಣಸಿನಕಾಯಿಯವರಂತಹ ನಾಯಕ ಬೇಕು ಎಂದು ಬಿಜೆಪಿ ಹಿರಿಯ ಮುಖಂಡ ಕಾಂತಿಲಾಲ್ ಬನ್ಸಾಲಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬುದ್ಧ, ಬಸವ, ಭೀಮ, ರಾಮ, ಶರೀಫರ ಸಮಾನತೆಯ ಮಂದಿರ ಕಟ್ಟಲು ಈಗಾಗಲೇ ಒಂದು ಹೆಜ್ಜೆ ಮುಂದೆ ಇಡಲಾಗಿದೆ. 2023ರ ಚುನಾವಣೆ ನಂತರ ಅನಿಲ ಮೆಣಸಿನಕಾಯಿ ಗದುಗಿಗೆ ಬರುತ್ತಿಲ್ಲ ಎಂದು ಹಲವರು ಟೀಕೆ ಮಾಡುತ್ತಿದ್ದಾರೆ. ಆದರೆ,



> ಕುರ್ತಕೋಟಿ ಗ್ರಾಮದಲ್ಲಿ ಸಮಾನತೆಯ ಮಂದಿರ ಕಟ್ಟಲು 2 ಎಕರೆ ಭೂಮಿಯನ್ನು ದಾನವಾಗಿ ನೀಡಿದ್ದಾರೆ. ದೇಶಕ್ಕೆ ರಾಮ ಮಂದಿರ ಒಂದು ಕಡೆಯಾದರೆ, ಇಡೀ ದೇಶವೇ ತಿರುಗಿ ನೋಡುವಂತಹ ಭೀಮ ಮಂದಿರ ಕಟ್ಟಲು ಅನಿಲ ಮೆಣಸಿನಕಾಯಿ ಪಣ ತೊಟ್ಟಿದ್ದಾರೆ. ಮಂದಿರ ನಿರ್ಮಿಸಲು ಅನೇಕ ಮುಖಂಡರ ಸಲಹೆ-ಸೂಚನೆ ಪಡೆದು ಅತೀ ಶೀಘ್ರದಲ್ಲಿ ಮಂದಿರ ನಿರ್ಮಾಣ ಪ್ರಾರಂಭ ಮಾಡಲಾಗುವುದು. ರಾಜ್ಯಾದ್ಯಂತ ಸಂಚರಿಸಿ ಭಿಕ್ಷೆ ಬೇಡಿ ಮಂದಿರ ನಿರ್ಮಿಸಲು ಅನಿಲ ಮೆಣಸಿನಕಾಯಿ ತೀರ್ಮಾನಿಸಿದ್ದಾರೆ. ಅವರ ಜೊತೆ ನಾವೆಲ್ಲರೂ ಗಟ್ಟಿಯಾಗಿ ನಿಲ್ಲುತ್ತೇವೆ.
>
> - ಕಾಂತಿಲಾಲ್ ಬನ್ಸಾಲಿ.
> ಬಿಜೆಪಿ ಹಿರಿಯ ಮುಖಂಡರು.

ಅವರು ಗದುಗಿನ ಅಭಿವೃದ್ಧಿಯ ಬಗ್ಗೆ ಚಿಂತನೆ ಮಾಡುತ್ತಿದ್ದಾರೆ. ಸಮಾಜದಲ್ಲಿನ ಮೇಲು-ಕೀಳು, ಅನಿಷ್ಠ ಪದ್ಧತಿ ಕುರಿತು ಹೋರಟ ಮಾಡಿದ್ದಾರೆ. ಹಿಂದೆ ಮನುಕುಲಕ್ಕಾಗಿ ಭಿಕ್ಷೆ ಬೇಡಿ ಬಡವರ ಹೊಟ್ಟೆ ತುಂಬಿಸುವ ಕಾರ್ಯ ಮಾಡಿದ್ದಾರೆ. ಚುನಾವಣೆಯ ಸೋಲಿನ ನಂತರವೂ ಹತಾಶರಾಗದೇ ಜನತಾ ಸದನ ಎನ್ನುವ ವಿಶೇಷ ಕಾರ್ಯಕ್ರಮ ಹಮ್ಮಿಕೊಂಡಿದ್ದರು. ಅವರು ಗದುಗಿನಿಂದ ದೂರ ಇದ್ದರೂ ಇಲ್ಲಿನ ಜನತೆಯ ಬಗ್ಗೆ ಚಿಂತನೆ ನಡೆಸುತ್ತಾರೆ. ಫೇಸ್‌ಬುಕ್ ಲೈವ್ ಬಂದು ಗದಗ ಜನತೆಗೆ ನೀರು, ರಸ್ತೆ, ವಿದ್ಯುತ್ ನೀಡಿ ಎಂದು ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಮಾಡಿದ್ದು ಗಮನಾರ್ಹ ಸಂಗತಿಯಾಗಿದೆ ಎಂದು ಹೇಳಿದರು.

ರಾಜಕೀಯಕ್ಕೆ ಬಂದವರು ಗಳಿಸಿಕೊಳ್ಳುತ್ತಾರೆ. ಆದರೆ, ಅನಿಲ ಮೆಣಸಿನಕಾಯಿ ಗದುಗಿಗೆ ಬಂದು ಕಳೆದುಕೊಂಡಿದ್ದಾರೆ. ಅವರಲ್ಲಿ ಸ್ನೇಹದ ಗುಣವಿದೆ. ಅವರ ಗುಣ ನೋಡಿ ಜನತೆ ಅವರ ಹಿಂದೆ ಸಾಗರದಂತೆ ಬರುತ್ತಾರೆ. ಅನಿಲ ಮೆಣಸಿನಕಾಯಿ ಪ್ರಶ್ನಾತೀತ ನಾಯಕರಾಗಿದ್ದು, ಭೀಮ, ಬಸವ, ಬುದ್ಧ, ರಾಮ, ಶರೀಫರ ಮಂದಿರ ಕಟ್ಟಿ ಸಮಾಜದಲ್ಲಿ ಎಲ್ಲರೂ ಒಪ್ಪುವಂತಹ ಸಮಾನತೆಯ ಮಂದಿರ ಕಟ್ಟಲು ತಿರ್ಮಾನಿಸಿದ್ದು ಗಮನಾರ್ಹ ಸಂಗತಿಯಾಗಿದೆ ಎಂದು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದ ಅನಂದ ಸೇಠ್ ಹಾಗೂ ಚಂದ್ರಶೇಖರ ಹರಿಜನ ಹೇಳಿದರು.

ಈ ಸಂದರ್ಭದಲ್ಲಿ ಮುತ್ತಣ್ಣ ಗದುಗಿನ, ಉಡಚಪ್ಪ ಹಳ್ಳಿಕೇರಿ, ವಸಂತ ಪಡಗದ, ಮಂಜುನಾಥ್ ವ್ಯಾಗೇರಿ, ತೋಂಟೇಶ್ ಮುತ್ತಿನಪೆಂಡಿಮಠ, ಚನ್ನಮ್ಮ ಹುಳಕಣ್ಣನವರ, ವಿಜಯಲಕ್ಷ್ಮೀ ಮಾನ್ವಿ, ಶರಣಪ್ಪ ಚಿಂಚಲಿ, ಪರಮೇಶ ನಾಯಕ, ಟಿ.ಡಿ ಪೂಜಾರ ಉಪಸ್ಥಿತರಿದ್ದರು.

ಜಿಲ್ಲಾ ಅಭಿವೃದ್ಧಿ ಸಮನ್ವಯ, ಉಸ್ತುವಾರಿ ಸಮಿತಿ (ದಿಶಾ) ಸಭೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ

# ತೋಟಗಾರಿಕೆ ಕ್ಷೇತ್ರ ವಿಸ್ತರಣೆಗೆ ಕ್ರಮ ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ವಿವಿಧ ಯೋಜನೆಗಳ ಅಭಿವೃದ್ಧಿ ಕಾರ್ಯಗಳು ಶೀಘ್ರಗತಿಯಲ್ಲಿ ಆಗಬೇಕು. ಈ ನಿಟ್ಟಿನಲ್ಲಿ ವಿವಿಧ ಇಲಾಖೆ ಅಧಿಕಾರಿಗಳು ಆಸಕ್ತಿ ವಹಿಸಿ ಕಾರ್ಯ ನಿರ್ವಹಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನರೇಗಾ ಯೋಜನೆಗೆ ನೇರವಾಗಿ ಅನುದಾನ ಬರುತ್ತಿದ್ದು, ಗ್ರಾಮದ ಮೂಲಭೂತ ಸೌಲಭ್ಯಗಳಿಗೆ ಕ್ರಿಯಾ ಯೋಜನೆ ತಯಾರಿಸಿ ಹೆಚ್ಚು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಪಿಡಿಓ ಹಾಗೂ



ತಾ.ಪಂ ಇಒಗಳು ಶ್ರಮಿಸಬೇಕು. ವಿವಿಧ ಇಲಾಖೆಯ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ಸರಿಯಾದ ರೀತಿಯಲ್ಲಿ ತಲುಪಬೇಕು. ಈ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳನ್ನು ತಲುಪಿಸುವಲ್ಲಿ ಅಧಿಕಾರಿಗಳು ತಮ್ಮ ಕಾರ್ಯ ಶೈಲಿಯಲ್ಲಿ ಸಕಾರಾತ್ಮಕ ಬದಲಾಯಿಣೆ ತಂದು, ತಂಡವಾಗಿ ಕೆಲಸ ಮಾಡಬೇಕು ಎಂದು ಸೂಚಿಸಿದರು.

ಗದಗ ಜಿಲ್ಲೆಯು ತೋಟಗಾರಿಕೆಗೆ ಪೂರಕ ವಾತಾವರಣ ಹೊಂದಿದ್ದು, ರೈತರ ಆದಾಯ ಹೆಚ್ಚಿಸುವುದರ ಬಗ್ಗೆ ಮನವರಿಕೆ ಮಾಡಿ ತೇಾಟಗಾರಿಕೆ ಬೆಳೆಗಳನ್ನು ಬೆಳೆಯಲು ಪ್ರೋತ್ಸಾಹಿಸಬೇಕು. ವರ್ಷದಿಂದ ವರ್ಷಕ್ಕೆ ತೊಟಗಾರಿಕೆ ವಿಸ್ತರಣೆಯಾಗುವಂತೆ ಕ್ರಮ ವಹಿಸಬೇಕು. ಜನೌಷಧಿ ಕೇಂದ್ರಗಳು ಸರಿಯಾಗಿ ಕಾರ್ಯನಿರ್ವಹಿಸಿ ಬಡ ಜನರಿಗೆ ಉಪಯೋಗ ಆಗಬೇಕು ಎಂದು ಸಂಸದರು ನಿರ್ದೇಶನ ನೀಡಿದರು.

ಇದಕ್ಕೆ ಉತ್ತರ ನೀಡಿದ ಜಿಲ್ಲಾ ಆರೋಗ್ಯಾಧಿಕಾರಿಗಳು, ಜಿಲ್ಲೆಯಲ್ಲಿರುವ ಎಲ್ಲಾ ಜನೌಷಧಿ ಕೇಂದ್ರಗಳು ಸಮರ್ಪಕವಾಗಿ ಕೆಲಸಮಾಡುತ್ತಿವೆ ಎಂದು ಸಭೆಗೆ ಮಾಹಿತಿ ನೀಡಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮಕ್ಕಳ ಹಾಜರಾತಿಗೆ ಅನುಗುಣವಾಗಿ ಶಿಕ್ಷಕರು ಕಾರ್ಯನಿರ್ವಹಿಸಬೇಕು. ಶಿಕ್ಷಕರು ಕೊರತೆಯಿದ್ದ ಶಾಲೆಗಳಲ್ಲಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಕ್ರಮ ವಹಿಸಬೇಕು. ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ, ಹೆಸ್ಕಾಂ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಪರಿಶಿಲನೆ ನಡೆಸಲಾಯಿತು. ಈ ಸಂದರ್ಭದಲ್ಲಿ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಸಿ.ಇಓ ಭರತ್ ಎಸ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಜಲಜೀವನ್ ಮಿಷನ್ ಕೇಂದ್ರದ ಸರ್ಕಾರದ ಮಹಾತ್ವಾಕಾಂಕ್ಷಿ ಯೊಜನೆಯಾಗಿದ್ದು, ತಾಂತ್ರಿಕ ತೊಂದರೆ ಸರಿಪಡಿಸಿ ಪ್ರತಿ ಮನೆ ಮನೆಗೆ ಸಮರ್ಪಕವಾಗಿ ನೀರು ಸರಬರಾಜು ಮಾಡಲು ಕ್ರಮ ವಹಿಸಬೇಕು. ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳ ಪಟ್ಟಿ ಮಾಡಿ ಪರಿಶೀಲನೆ ನಡೆಸಬೇಕು. ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ 2016ರಿಂದ 2020ರವರೆಗೆ 5747 ಗುರಿಯಿದ್ದು, ಆ ಪೈಕಿ 4855 ಮನೆಗಳು ಮುಕ್ತಾಯವಾಗಿದೆ. ಇನ್ನೂ 892 ಮನೆಗಳು ಬಾಕಿ ಇದ್ದು, ಇದಕ್ಕೆ ಪ್ರತ್ಯೇಕವಾದ ಸಭೆ ನಡೆಸಿ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಬೇಕೆಂದು ಸಂಸದ ಬಸವರಾಜ ಬೊಮ್ಮಾಯಿ ಸೂಚಿಸಿದರು.

## ಸಂಪಾದಕೀಯ

# ಉಲ್ಟಾ ಹೊಡೆದ ಪ್ರತಿಪಕ್ಷ

ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಅವರ ರಾಜೀನಾಮೆಗೆ ಪಟ್ಟು ಹಿಡಿದಿದ್ದ ಪ್ರತಿಪಕ್ಷಗಳ ನಾಯಕರು ಈಗ ಏಕಾಏಕಿ ಮೌನಕ್ಕೆ ಶರಣಾಗಿದ್ದಾರೆ. ಸಿದ್ದರಾಮಯ್ಯ ನೈತಿಕ ಹೊಣೆ ಹೊತ್ತು ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು ಎಂದು ಮಾಧ್ಯಮಗಳ ಮುಂದೆ ಬೆಂಕಿ ಚೆಂಡಿನಂತೆ ಮಾತನಾಡುತ್ತಿದ್ದ ನಾಯಕರು ಈಗ ಉಲ್ಟಾ ಹೊಡೆದಿದ್ದಾರೆ.

ಇದಕ್ಕೆ ಮುಖ್ಯ ಕಾರಣ ಪ್ರತಿಪಕ್ಷದ ನಾಯಕರ ವಿರುದ್ಧವೂ ಎಫ್‌ಐಆರ್ ದಾಖಲಾಗುತ್ತಿರುವುದು. ಪ್ರತಿಪಕ್ಷ ನಾಯಕ ಆರ್ ಅಶೋಕ್, ಕೇಂದ್ರ ಸಚಿವ ಕುಮಾರಸ್ವಾಮಿ ಸೇರಿದಂತೆ ಒಟ್ಟು ಎಂಟು ಜನ ಬಿಜೆಪಿಯ ನಾಯಕರ ವಿರುದ್ದ ಎಫ್‌ಐಆರ್ ದಾಖಲಾಗುವ ಹಂತದಲ್ಲಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಇಡೀ ಸಂಕಷ್ಟ ಎದುರಾಗುತ್ತಿದ್ದಂತೆ ಪ್ರತಿಪಕ್ಷಗಳ ನಾಯಕರ ವಿರುದ್ಧ ಅವರು ಪ್ರತ್ಯಸ್ತ್ರ ಹೂಡಿದ್ದಾರೆ. ಭ್ರಷ್ಟಾಚಾರ ಹಾಗೂ ಇನ್ನಿತರ ಕಾರಣಗಳಿಗಾಗಿ ಎಂಟು ಜನರ ವಿರುದ್ಧ ಎಫ್‌ಐಆರ್ ದಾಖಲಾಗುವಂತೆ ಪ್ರತಿಪಕ್ಷ ನಾಯಕರು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ಹೇಳಿಕೆಯಿಂದ ಹಿಂದೆ ಸರಿದಿದ್ದಾರೆ.

ಈಗ ಬಿಜೆಪಿ ಯಾವೊಬ್ಬ ನಾಯಕರು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕು ಎಂದು ಹೇಳುತ್ತಿಲ್ಲ. ಅದರ ಬದಲಾಗಿ ಮುಖ್ಯಮಂತ್ರಿಗಳನ್ನ ಕೆಳಗೀಳಿಸಲು ಕಾಂಗ್ರೆಸ್ ನಲ್ಲೇ ಷಡ್ಯಂತ್ರ ನಡೆದಿದೆ ಎಂದು ತಮ್ಮ ಹೇಳಿಕೆಯನ್ನು ತಿರುಚುವ ಪ್ರಯತ್ನವನ್ನು ಮಾಡಿದ್ದಾರೆ.

ಒಟ್ಟಾರೆ ರಾಜ್ಯದಲ್ಲಿ ಸೇಡಿನ ರಾಜಕಾರಣ ನಡೆಯುತ್ತಿರುವ ಹಿನ್ನೆಲೆಯಲ್ಲಿ ಆಡಳಿತ ಮತ್ತು ಪ್ರತಿಪಕ್ಷದ ನಾಯಕರ ಅನೇಕ ಹಗರಣಗಳು ಹೊರಬರುವಂತಾಗಿದೆ. ಆ ಮೂಲಕವಾದರೂ ನಾವು ಎಂಥವರಿಗೆ ಮತ ನೀಡಿದ್ದೇವೆ ಎನ್ನುವುದರ ಅರಿವಾದರೆ ಸಾಕು.

### ಪೂಜಾ ಗ್ರಾಮಪುರೋಹಿತರಿಗೆ ದತ್ತ ಭಕ್ತ ಮಂಡಳಿಯಿಂದ ಸನ್ಮಾನ

# ಸಂಘಟಿತರಾದಾಗ ಸಮಾಜದ ಅಭಿವೃದ್ಧಿ ಸಾಧ್ಯ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬ್ರಾಹ್ಮಣರಲ್ಲಿನ ವಿವಿಧ ಪಂಗಡಗಳ ಸದಸ್ಯರೆಲ್ಲರೂ ಒಂದು ಕಡೆ ಸಂಘಟಿತರಾದಾಗ ಮಾತ್ರ ಬ್ರಾಹ್ಮಣ ಸಮಾಜದ ಅಭಿವೃದ್ಧಿ ಸಾಧ್ಯವಾಗುತ್ತದೆ. ಹೀಗಾಗಲು ಎಲ್ಲ ಮಠಾಧೀಶರು ಮನಸ್ಸು ಮಾಡಿ ಭಕ್ತರಿಗೆ ಮಾರ್ಗದರ್ಶನ ಮಾಡಬೇಕೆಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಸಂಘಟನಾ ಕಾರ್ಯದರ್ಶಿ ವಿಜಯ ನಾಡಜೋಷಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ರವಿವಾರ ಸಂಜೆ, ಬಂಗಾರದ ಪದಕ ಪುರಸ್ಕೃತೆ ಪೂಜಾ ಗ್ರಾಮಪುರೋಹಿತರಿಗೆ ದತ್ತ ಭಕ್ತ ಮಂಡಳಿ ನೀಡಿದ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡುತ್ತಿದ್ದರು.

ಎಲ್ಲ ಬ್ರಾಹ್ಮಣರನ್ನು ಒಗ್ಗೂಡಿಸುವ ಆಶಯದಿಂದ ಅಖಿಲ ಕರ್ನಾಟಕ ಮಹಾಸಭಾ ರಚನೆಯಾಗಿದೆ. ಈ ಸಂಘಟನೆಯ ರಾಜ್ಯಾಧ್ಯಕ್ಷರಾದ ಅಶೋಕ ಹಾರ್ನಹಳ್ಳಿಯವರನ್ನು ಮೊದಲ್ಗೊಂಡು ಎಲ್ಲ ಪದಾಧಿಕಾರಿಗಳು, ಸದಸ್ಯರು ಎಲ್ಲ ಬ್ರಾಹ್ಮಣರನ್ನು ಒಂದೇ ವೇದಿಕೆಯಡಿ ತರಲು ಶ್ರಮಿಸುತ್ತಿದ್ದಾರೆ. ಇದನ್ನು



ಎಲ್ಲರೂ ಬೆಂಬಲಿಸಬೇಕೆಂದು ನಾಡಜೋಷಿ ಹೇಳಿದರು.

ಪಟ್ಟಣದ ಪೂಜಾ ಗ್ರಾಮಪುರೋಹಿತ ಎಂ.ಎ. ಕನ್ನಡದಲ್ಲಿ ಬಂಗಾರದ ಪದಕ ಪಡೆದಿರುವುದು ಬ್ರಾಹ್ಮಣರಿಗೆ ವಿದ್ಯೆಯೊಂದೇ ಅಸ್ತ್ರ ಎಂಬುದನ್ನು ಮತ್ತೆ ಮತ್ತೆ ಸಾಬೀತು ಮಾಡಿದೆ. ಈ ಸಾಧನೆ ಮಾಡಿದ ಅವಳು ಇನ್ನೂ ಮುಂದೆ ಹೆಚ್ಚಿನ ಓದನ್ನು ಓದುವುದಾದರೆ ಅದಕ್ಕೆ ಮಹಾಸಭಾ ಮತ್ತು ವೈಯಕ್ತಿಕವಾಗಿ ಏನೆಲ್ಲ ಸಹಾಯ ಬೇಕೋ ಅದೆಲ್ಲವನ್ನೂ ನಿಡುವುದಾಗಿ ತಿಳಿಸಿ, ಇದರಿಂದ ನರೇಗಲ್ಲ ಮಾತ್ರವಲ್ಲ ಇಡೀ ಬ್ರಾಹ್ಮಣರ ಬಗೆಗಿನ ಅಭಿಮಾನ ಹೆಚ್ಚಾಗಿದೆ ಎಂದರು.

ಗದಗ ಜಿಲ್ಲಾಧ್ಯಕ್ಷರು ಮಾತನಾಡಿ, ಗದಗ ಜಿಲ್ಲೆ ಇಂತಹ ಅನೇಕ ಪ್ರತಿಭಾವಂತರಿಗೆ ಜನ್ಮ ನೀಡಿದ ಜಿಲ್ಲೆ. ಅದರಲ್ಲೂ ಈ ಸಾರೆ ಈ ವಿದ್ಯಾರ್ಥಿನಿ ತನ್ನ ವಿದ್ಯಾಭ್ಯಾಸದಲ್ಲಿ ಬಂಗಾರದ ಪದಕ ಪಡೆದಿರುವುದು ನಮಗೆಲ್ಲರಿಗೂ ಹೆಮ್ಮೆಯಾಗಿದೆ. ಅವಳಿಗೆ ಏನೇ ಸಹಕಾರ ಬೇಕಾದಲ್ಲಿ ಗದಗ ಜಿಲ್ಲಾ ಬ್ರಾಹ್ಮಣ ಸಂಘವು ನೀಡಲು ಸಿದ್ಧವಿದೆ ಎಂದರಲ್ಲದೆ, ನರೇಗಲ್ಲದ ಶ್ರೀ ದತ್ತ ಭಕ್ತ ಮಂಡಳಿಯು ಯಾವಾಗಲೂ ಧಾರ್ಮಿಕ ಕಾರ್ಯಗಳನ್ನು ಮಾಡುವುದರಲ್ಲಿ, ಪ್ರತಿಭಾವಂತರನ್ನು ಗುರುತಿಸುವಲ್ಲಿ ಮುಂದು ಎಂದು ಅವರು ಶ್ಲಾಘಿಸಿದರು.

ಸಮಾರಂಭವನ್ನುದ್ದೇಶಿಸಿ ತಾಲೂಕಾ ಬ್ರಾಹ್ಮಣ ಸಂಘದ ಅಧ್ಯಕ್ಷ ರಾಮಣ್ಣ ಗಾಡಗೋಳಿ, ಸನ್ಮಾನಿತೆ ಪೂಜಾ ಗ್ರಾಮಪುರೋಹಿತ, ರೇಣುಕಾ ಗ್ರಾಮಪುರೋಹಿತ, ಆನಂದ ಕುಲಕರ್ಣಿ, ಸುನೀಲ ಅಂಬೇಕರ ಇನ್ನೂ ಮುಂತಾದವರು ಮಾತನಾಡಿದರು. ಅನೇಕ ಗಣ್ಯರು ಪೂಜಾಳನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ವೇ.ಮೂ. ವಿಶ್ವನಾಥಭಟ್ಟ ವೈದ್ಯ, ಶೇಷಗಿರಿ ಕುಲಕರ್ಣಿ, ಬಿ.ಎಲ್. ಕುಲಕರ್ಣಿ, ಆರ್.ಡಿ. ಕುಲಕರ್ಣಿ, ವಿಶ್ವನಾಥಭಟ್ಟ ವೈದ್ಯ, ಎಸ್.ಎಚ್. ಕುಲಕರ್ಣಿ, ಅರುಣ ಸೂರಭಟ್ಟನವರ, ಎ.ಜಿ. ಕುಲಕರ್ಣಿ, ಕಿರಣ ಕಾಳೆ, ಮಂಜುನಾಥ ಗ್ರಾಮಪುರೋಹಿತ, ವಿನಾಯಕ ಗ್ರಾಮಪುರೋಹಿತ, ಲಕ್ಷ್ಮೀ ಗ್ರಾಮಪುರೋಹಿತ, ಸಶೋಭಾ ಕುಲಕರ್ಣಿ, ನಿಖಿತಾ ಗ್ರಾಮಪುರೋಹಿತ, ಭಾರತಿಬಾಯಿ ಗ್ರಾಮಪುರೋಹಿತ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಶ್ರೀ ದತ್ತ ಭಕ್ತ ಮಂಡಳಿ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ರಘುನಾಥ ಕೊಂಡಿ ಸ್ವಾಗತಿಸಿದರು. ಅರುಣ ಕುಲಕರ್ಣಿ ನಿರೂಪಿಸಿದರೆ, ಆದರ್ಶ ಕುಲಕರ್ಣಿ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಡಾ. ಜಿ.ಕೆ. ಕಾಳೆ ಮಾತನಾಡಿ, ನಮ್ಮ ಊರಿನಿಂದ, ನಮ್ಮ ಸಮಾಜದಿಂದ ಈವರೆಗೆ ಯಾರೂ ಐಎಎಸ್ ಮಾಡಿಲ್ಲ. ಪೂಜಾಳಲ್ಲಿ ಆ ಶಕ್ತಿಯಿದೆ ಎಂಬುದನ್ನು ನಾವು ಕಂಡುಕೊಂಡಿದ್ದೇವೆ. ಆದ್ದರಿಂದ ಅವಳು ಐಎಎಸ್ ಮಾಡುವುದೇ ಆದರೆ ಅದಕ್ಕೆ ಬೇಕಾದ ಎಲ್ಲ ಸಾಹಿತ್ಯ, ಸಾಮಗ್ರಿಯನ್ನು ತಾವು ಒದಗಿಸುವುದಾಗಿ ತಿಳಿಸಿದರು.

# ಈರುಳ್ಳಿ ರಾಶಿಗೆ ನುಗ್ಗಿದ ಕಾಲುವೆ ನೀರು
## ಬೆಳೆ ರಕ್ಷಣೆಗೆ ಪರದಾಡಿದ ರೈತರು



**■ವಿಜಯಸಾಕ್ಷಿ ಸುದ್ದಿ, ಡಂಬಳ**

ಈರುಳ್ಳಿ ಬೆಲೆ ಏರಿಳಿಕೆಯ ಆತಂಕ, ಬೀಜ-ಗೊಬ್ಬರ, ಕಳೆ ತಗೆಯುವುದು ಸೇರಿದಂತೆ ಸಾವಿರಾರು ರೂ ಖರ್ಚು ಮಾಡಿ ಈರುಳ್ಳಿ ಬೆಳೆದು ಕಟಾವು ಮಾಡಿ ಸ್ವಚ್ಛಗೊಳಿಸಿ ಮಾರುಕಟ್ಟೆಗೆ ಕಳಿಸಿ ಉತ್ತಮ ಆದಾಯ ಪಡೆಯುವ ನಿರೀಕ್ಷೆಯಲ್ಲಿದ್ದ ರೈತರಿಗೆ ಅನಿರೀಕ್ಷಿತವಾಗಿ ಈರುಳ್ಳಿ ರಾಶಿಗೆ ನೀರು ನುಗ್ಗಿದ ಪರಿಣಾಮ ರೈತರು ಪರದಾಡಿದ ಘಟನೆ ಡಂಬಳದಲ್ಲಿ ಶನಿವಾರ ನಡೆಯಿತು.

ಸ್ಥಳೀಯ ತೋಂಟದಾರ್ಯ ಮಠದ ಗದಗ-ಮುಂಡರಗಿ ಸಂಪರ್ಕ ರಸ್ತೆಯ ಬಯಲು ಜಾಗೆಯಲ್ಲಿ ಹಲವು ರೈತರು ಈರುಳ್ಳಿ ಕೊಯ್ಲು ಮಾಡಿ ಸ್ವಚ್ಛಗೊಳಿಸಿ ಮಾರುಕಟ್ಟೆಗೆ ಕಳಿಸಲು ಸಿದ್ಧತೆ ಮಾಡಿಕೊಂಡಿದ್ದರು. ಆದರೆ, ಅನಿರೀಕ್ಷಿತವಾಗಿ ವಿಕ್ಟೋರಿಯಾ ಕೆರೆಯ ನೀರನ್ನು ಸಣ್ಣ ನೀರಾವರಿ ಇಲಾಖೆಯ ಕಾಲುವೆ ಮೂಲಕ ಹರಿಸುವಾಗ ಕಾಲುವೆಯಲ್ಲಿ ಹೆಚ್ಚು ತ್ಯಾಜ್ಯ ಸಂಗ್ರಹವಾಗಿದ್ದರಿಂದ ನೀರು ಎಲ್ಲೆಂದರಲ್ಲಿ ಹರಿದು ನಮ್ಮ ಈರುಳ್ಳಿ ರಾಶಿಗೆ ನುಗ್ಗಿ ಹಾನಿಯಾಗಿದೆ ನಮಗೆ ಅಗತ್ಯ ಪರಿಹಾರ ನೀಡಬೇಕು ಎನ್ನುತ್ತಾರೆ ರೈತರಾದ ಜಯಶ್ರೀ ಸುರಟೂರ ಮತ್ತು ಶ್ರೀಕಾಂತ ಪ್ಯಾಟಿ.

ಸಾಲ ಮಾಡಿ, ದುಬಾರಿ ಗೊಬ್ಬರ, ಕೂಲಿ ಸೇರಿದಂತೆ ಈರುಳ್ಳಿಗೆ ಕನಿಷ್ಠ ಪ್ರತಿ ಎಕರೆಗೆ 50 ಸಾವಿರ ರೂ ಖರ್ಚು ಬರುತ್ತದೆ. ಕಟಾವು ಮಾಡಿ ಸ್ವಚ್ಛಗೊಳಿಸಿ ಸ್ವಲ್ಪ ಒಣಹಾಕಿ ಚೀಲಕ್ಕೆ ತುಂಬಿ ಮಾರುಕಟ್ಟೆಗೆ ಕಳಿಸುವ ಸಿದ್ಧತೆ ಮಾಡಿಕೊಂಡಿದ್ದೆವು. ಆದರೆ, ಈರುಳ್ಳಿ ರಾಶಿಗೆ ಕಾಲುವೆ ನೀರು ನುಗ್ಗಿದ್ದರಿಂದ ಈರುಳ್ಳಿ ಬೆಳೆ ಸಂಪೂರ್ಣವಾಗಿ ಒದ್ದೆಯಾಗಿದೆ. ನಮ್ಮ ಗ್ರಾಮದ ಕೆರೆ ಮತ್ತು ಕಾಲುವೆಗಳ ಸಮರ್ಪಕ ನಿರ್ವಹಣೆಯಾಗುತ್ತಿಲ್ಲ. ಈ ಭಾಗದ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಕೆರೆ ನಿರ್ವಹಣೆಗೆ ಸಮಿತಿ ಮಾಡಬೇಕು. ಸಮರ್ಪಕವಾಗಿ ಕಾಲುವೆ ನಿರ್ವಹಣೆ ಮತ್ತು ಕಾಲುವೆ ದುರಸ್ಥಿಗೆ ಆದ್ಯತೆ ನೀಡಬೇಕು ಎನ್ನುವ ರೈತ ಸಮುದಾಯದಿಂದ ಮಾತುಗಳು ಕೇಳಿ ಬಂದವು.

### ವಸತಿ ಯೋಜನೆಯ ಅನುದಾನದಲ್ಲಿ ಭ್ರಷ್ಟಾಚಾರ ನಡೆಸುತ್ತಿರುವ ಗುತ್ತಿಗೆದಾರರ ಮೇಲೆ ಕ್ರಮಕ್ಕೆ ಆಗ್ರಹ

# ಸ್ಲಂ ಬೋರ್ಡ್ ಕಚೇರಿಗೆ ಮುತ್ತಿಗೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದ ವಿವಿಧ ಸ್ಲಂ ಪ್ರದೇಶಗಳಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆಡಿಯಲ್ಲಿ ಮಂಜೂರಾಗಿರುವ 863 ಮನೆಗಳ ನಿರ್ಮಾಣ ಕಾರ್ಯವನ್ನು ನಡೆಸಲಾಗುತ್ತಿದ್ದು, ಸ್ಲಂ ಬೋರ್ಡ್ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಕಳಪೆ ಕಾಮಗಾರಿ ನಡೆಸಿದ್ದಲ್ಲದೆ, ಯಾವುದೇ ಮನೆಗಳನ್ನು ಪೂರ್ಣ ಪ್ರಮಾಣದಲ್ಲಿ ನಿರ್ಮಾಣ ಮಾಡದೇ ಸರ್ಕಾರಕ್ಕೆ ಸುಳ್ಳು ದಾಖಲೆಗಳನ್ನು ಸಲ್ಲಿಸಿ ಭಾರೀ ಭ್ರಷ್ಟಾಚಾರ ನಡೆಸಿದ್ದಾರೆಂದು ಆರೋಪಿಸಿ ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ನೂರಾರು ಸ್ಲಂ ನಿವಾಸಿಗಳು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಗದಗ-ಬೆಟಗೇರಿ ಅವಳಿ ನಗರದಲ್ಲಿ ಗುತ್ತಿಗೆದಾರರು ಸರ್ಕಾರದ ಆದೇಶವನ್ನು ಗಾಳಿ ತೂರಿ ರಾಜ ಕಾಲುವೆ ಹಾಗೂ ಕೆರೆ ಜಾಗದಲ್ಲಿ ಮನೆಗಳನ್ನು ನಿರ್ಮಿಸುತ್ತಿದ್ದಾರೆ. ಕೂಲಿ



ಕಾರ್ಮಿಕರು ಹಾಗೂ ಕಟ್ಟಡ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ವಾಸವಾಗಿರುವ ಕೊಳಗೇರಿ ಪ್ರದೇಶದಲ್ಲಿ ಜನರಿಂದ ಲಕ್ಷಾಂತರ ಹಣವನ್ನು ಪಡೆದುಕೊಂಡು ಸರ್ಕಾರದ ಮನೆಗಳನ್ನು ನಿರ್ಮಿಸಿಕೊಡುತ್ತಿರುವ ಗುತ್ತಿಗೆದಾರರ ಕ್ರಮವನ್ನು ಸ್ಲಂ ಸಮಿತಿ ಖಂಡಿಸುತ್ತದೆ. ಇದರ ಬಗ್ಗೆ ಅನೇಕ ಬಾರಿ ಸ್ಲಂ ಬೋರ್ಡ್ ಅಧಿಕಾರಿಗಳ ಗಮನಕ್ಕೆ ತಂದರೂ ಕ್ರಮ ಕೈಗೊಂಡಿಲ್ಲ.

ಈ ಹಿಂದೆ ಗದಗ-ಬೆಟಗೇರಿ ಅವಳಿ ನಗರದಲ್ಲಿ ಮತ್ತು ಗದಗ ಜಿಲ್ಲೆಯ ಅನೇಕ ತಾಲೂಕು ಕೇಂದ್ರದ ಸ್ಲಂ ಪ್ರದೇಶದಲ್ಲಿ ವಸತಿ ಮತ್ತು ಅಭಿವೃದ್ಧಿ ಅನುದಾನದಲ್ಲಿ ಭಾರೀ ಭ್ರಷ್ಟಾಚಾರವನ್ನು ನಡೆಸಿರುವ ಗುತ್ತಿಗೆದಾರನಿಗೆ ಮತ್ತೆ ಗದಗ-ಬೆಟಗೇರಿ ನಗರದಲ್ಲಿಯ 863 ಮನೆಗಳನ್ನು ನಿರ್ಮಿಸಲು ಜವಾಬ್ದಾರಿ ನೀಡಿದ್ದರಿಂದ ಸ್ಲಂ ಜನರಿಗೆ ವಸತಿ ಯೋಜನೆಯಿಂದ ವಂಚನೆಯಾಗುತ್ತಿದೆ ಎಂದು ಆರೋಪಿಸಿದರು.

ಆವಾಸ್ ಯೋಜನೆಡಿಯಲ್ಲಿ ನಡೆಸಲಾಗುತ್ತಿರುವ ಕಾಮಗಾರಿಯನ್ನು ನಿಲ್ಲಿಸಬೇಕು, ಕಳಪೆ ಕಾಮಗಾರಿ ಹಾಗೂ ಸರ್ಕಾರದ ಅನುದಾನದ ದುರ್ಬಳಕ್ಕೆ ಮಾಡಿಕೊಂಡಿರುವ ಗುತ್ತಿಗೆದಾರರ ಮೇಲೆ ಕ್ರಮ ಕೈಗೊಳ್ಳಬೇಕು, ಪರವಾನಿಗೆ ಇಲ್ಲದೇ ಮನೆಗಳನ್ನು ನಿರ್ಮಿಸುತ್ತಿರುವ ಮಾಫಿಯಾಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು, ತಕ್ಷಣ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಲಂ ಪ್ರದೇಶಗಳ ಸಮಸ್ಯಗಳು ಮತ್ತು ವಸತಿ ಯೋಜನೆಯ ಕುರಿತು ಸ್ಲಂ ಸಮಿತಿ ಮುಖಂಡರ ಜೊತೆಗೆ ಕುಂದು-ಕೊರತೆಗಳ ಸಭೆಯನ್ನು ಕರೆಯಲು ಕ್ರಮಕೈಗೊಳ್ಳಬೇಕೆಂದು ಅವರು ಒತ್ತಾಯಿಸಿದರು.

ಸ್ಲಂ ಸಮಿತಿಯ ಪದಾಧಿಕಾರಿಗಳಾದ ಅಶೋಕ ಕುಸಬಿ, ಪರವೀನಬಾನು ಹವಾಲ್ದಾರ, ಮೆಹರುನಿಸಾ ಢಾಲಾಯತ, ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ದುರ್ಗಪ್ಪ ಮಣ್ಣವಡ್ಡರ, ಮೆಹರುನಿಸಾ ಡಂಬಳ, ಮೈಮುನ ಬೈರಕದಾರ, ಆಯಿಷಾ ಉಮಚಗಿ, ಆರೀಫ ಕಾಗದಗಾರ, ಪ್ರೇಮಾ ಮಣವಡ್ಡರ, ಸುಶೀಲಮ್ಮ ಗೊಂದಾರ, ಮೆಹಬೂಬಸಾಬ ಬಳ್ಳಾರಿ, ಸಾಕ್ರುಬಾಯಿ ಗೋಸಾವಿ, ಖಾಜೇಸಾಬ ಇಸ್ಮಾಯಿಲನವರ, ಮಕ್ತುಮಸಾಬ ಮುಲ್ಲಾನವರ, ಈರಮ್ಮ ಬೇವಿನಮರದ, ನಾಗರಾಜ ಮಣವಡ್ಡರ, ದಾದು ಗೋಸಾವಿ, ಖಾಜೇಸಾಬ ಬಳ್ಳಾರಿ, ಮಲೇಶಪ್ಪ ಕಲಾಲ, ಚಂದ್ರಪ್ಪ ಲಕ್ಕುಂಡಿ, ನಜೀರಅಹ್ಮದ ಹಾವಗಾರ, ಶರಣಪ್ಪ ಬಿಂಕದಕಟ್ಟಿ ಮುಂತಾದವರಿದ್ದರು.

ವಸತಿ ಯೋಜನೆಯಲ್ಲಿ ಸ್ಲಂ ಬೋರ್ಡ್ ಅಧಿಕಾರಿಗಳು ಮತ್ತು ಗುತ್ತಿಗೆದಾರರು ನಡೆಸುತ್ತಿರುವ ಕಳಪೆ ಕಾಮಗಾರಿ ಮತ್ತು ಭ್ರಷ್ಟಾಚಾರ, ಸ್ಲಂ ನಿವಾಸಿಗಳಿಗೆ ಸುಳ್ಳು ಹೇಳಿ ಸ್ಲಂ ಬೋರ್ಡ್ ಅಧಿಕಾರಿಗಳು ಲಕ್ಷಾಂತರ ಹಣವನ್ನು ಪಡೆದುಕೊಂಡು ಮೋಸ ಮಾಡಿರುವ ಕುರಿತು ಸ್ಲಂ ಸಮಿತಿಯು ನಿಯೋಗದೊಂದಿಗೆ ತೆರಳಿ ಮುಖ್ಯಮಂತ್ರಿಗಳಿಗೆ, ವಸತಿ ಇಲಾಖೆ ಸಚಿವರಿಗೆ ಹಾಗೂ ಸ್ಲಂ ಬೋರ್ಡ್ ಅಧ್ಯಕ್ಷರ ಗಮನಕ್ಕೆ ತರಲಾಗುವುದೆಂದು ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಇದೇ ಸಂದರ್ಭದಲ್ಲಿ ಹೇಳಿದರು.

# ಬೆಟ್ಟಿಂಗ್ ವ್ಯಸನದ ವಿರುದ್ಧ ಜಾಗೃತಿ



**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಜೀವಧ್ವನಿ ಸಂಸ್ಥೆಯ ನಿಖಿಲ್ ಹಂಜಗಿ ನೇತೃತ್ವದಲ್ಲಿ ಯುವಕರಲ್ಲಿ ಬೆಟ್ಟಿಂಗ್ ವ್ಯಸನದ ವಿರುದ್ಧ ಜಾಗೃತಿ ಕಾರ್ಯಕ್ರಮವನ್ನು ನಡೆಸುತ್ತಿದೆ. ಬೆಟ್ಟಿಂಗ್‌ನ ಅಪಾಯಗಳ ಬಗ್ಗೆ ಅವರಿಗೆ ತಿಳಿಸಲು ಪರಿಣಾಮಕಾರಿ ಸಂದೇಶಗಳೊಂದಿಗೆ ಬೀದಿ ಗೋಡೆಗಳ ಮೇಲೆ ಸ್ಟಿಕ್ಕರ್‌ಗಳನ್ನು ಅಂಟಿಸುತ್ತಿದ್ದಾರೆ. ಜಾಗೃತಿ ಮೂಡಿಸುವುದು, ಬೆಟ್ಟಿಂಗ್ ಚಟವನ್ನು ಕಡಿಮೆ ಮಾಡುವುದು ಮತ್ತು ಜವಾಬ್ದಾರಿಯುತ ನಡವಳಿಕೆಯನ್ನು ಉತ್ತೇಜಿಸುವುದು ಸದರಿ ಸಂಸ್ಥೆಯ ಗುರಿಯಾಗಿದೆ.

ಯುವಕರು ಬೆಟ್ಟಿಂಗ್ ಅಪ್ಲಿಕೇಶನ್‌ಗಳಿಗೆ ಬಲಿಯಾಗುತ್ತಿದ್ದಾರೆ. ಆರ್ಥಿಕ, ಮಾನಸಿಕ ಮತ್ತು ಸಾಮಾಜಿಕ ಯೋಗಕ್ಷೇಮವನ್ನು ಅಪಾಯಕ್ಕೆ ತೆಗೆದುಕೊಳ್ಳುತ್ತಿದ್ದಾರೆ. ಯುವಕರನ್ನು ಈ ವ್ಯಸನದಿಂದ ರಕ್ಷಿಸಲು ಮತ್ತು ಉಜ್ವಲ ಭವಿಷ್ಯದತ್ತ ಮಾರ್ಗದರ್ಶನ ನೀಡುವ ಗುರಿಯನ್ನು ಸಂಸ್ಥೆ ಹೊಂದಿದೆ.

ಸಂಸ್ಥೆಯ ಕಾರ್ಯಕರ್ತರಾದ ರಾಘವೇಂದ್ರ ಬಳ್ಳಾರಿ, ಪರೋಕ್ಷ ಹೋಲಿ, ಕೃಷ್ಣ ಸಾಬೋಜಿ, ವಿನೋದ್, ಗುರು ಉಂಕಿ, ಕಿರಣ್ ಕೊಪ್ಪದ್ ಮುಂತಾದವರು ಈ ಸಮಾಜಮುಖಿ ಕಾರ್ಯದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ.

# ಉಚಿತ ನೋಟ್‌ಬುಕ್, ಬ್ಯಾಗ್ ವಿತರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಅಂಬಿಗ, ಗಂಗಾಮತ, ಸುಣಗಾರ, ಬಾರಕೇರ ಸಮುದಾಯದ ವಿದ್ಯಾರ್ಥಿಗಳಿಗೆ ನೋಟ್ ಬುಕ್ ಹಾಗೂ ಶಾಲಾ ಬ್ಯಾಗ್ ವಿತರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಗದಗ ಜಿಲ್ಲಾ ಅಂಬಿಗರ ಸಮಾಜದ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಸ್ವಾಗತಿಸಿ ಮಾತನಾಡಿ, ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿವರ್ಷ ನೋಟ್‌ಬುಕ್ ಹಾಗೂ ಬ್ಯಾಗ್‌ಗಳನ್ನು ಸಂಘಟನೆಯಿಂದ ಹಾಗೂ ಶಿಕ್ಷಣ ಪ್ರೇಮಿಗಳ ಸಹಾಯದಿಂದ ಉಚಿತವಾಗಿ ನೀಡುತ್ತಿದ್ದು, ಸಮುದಾಯದ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆಯಬೇಕು. ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ಕಲಿಸುವುದು



ಮುಖ್ಯವಾಗಿದೆ. ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ತಾವೆಲ್ಲರೂ ಕೈ ಜೋಡಿಸಿ ಎಂದರು.

ಸಭೆಯ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ನಿಜ ಶರಣ ಅಂಬಿಗರ ಚೌಡಯ್ಯ ಸಮಾಜದ ಜಿಲ್ಲಾಧ್ಯಕ್ಷ ರಾಮಣ್ಣ ಇರಕಲ್ಲ ವಹಿಸಿ ಮಾತನಾಡಿ, ತಮ್ಮೆಲ್ಲರ ಸಹಕಾರದಿಂದ ಸಾಮಾಜಿಕ ಕ್ರಿಯಾಶೀಲ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತ ಸಾಗಿರುವುದು ಸಂತಸ ತಂದಿದೆ. ಮುಂದಿನ ದಿನಮಾನಗಳಲ್ಲಿ ಸಂಘಟನೆಯ ವತಿಯಿಂದ ವಿವಿಧ ಕೌಶಲ್ಯ ತರಬೇತಿ ಕಾರ್ಯಾಗಾರ ನಡೆಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಕೆಪಿಸಿಸಿ ಮೀನುಗಾರಿಕೆ ವಿಭಾಗದ ಜಿಲ್ಲಾಧ್ಯಕ್ಷ ಗುರಪ್ಪ ತಿರ್ಲಾಪೂರ, ಸಮಾಜದ ಉಪಾಧ್ಯಕ್ಷ ಪ್ರವೀಣ ನೀಲಣ್ಣವರ, ರವಿಕುಮಾರ ಗುಡಿಸಾಗರ, ಮಂಜುನಾಥ ಗುಡಿಸಾಗರ, ಹರೀಶ್ ಬಾರಕೇರ, ರಮೇಶ ಬೆಣಕಲ್ಲ, ಚಂದ್ರಶೇಖರ ಬಾರಕೇರ, ಮಹಿಳಾ ಅಧ್ಯಕ್ಷೆ ಸುಜಾತ ಗುಡಿಸಾಗರ, ಸುಜಾತಾ ಬಾರಕೇರ, ಸೌಮ್ಯಾ ಸುಣಗಾರ, ನಿಂಗಪ್ಪ ಇಟಗಿ, ಅಮಿತ ಪೂಜಾರ, ರಾಜು ಪೂಜಾರ, ಮಾರುತಿ ಬಾರಕೇರ, ಬಸವರಾಜ ನರಗುಂದ ಸೇರಿದಂತೆ ಸಮಾಜದ ಹಿರಿಯರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಕಸಾಪದಿಂದ 'ತೋಟದಲ್ಲಿ ಸಾಹಿತ್ಯ ಕೂಟ' ವಿನೂತನ ಕಾರ್ಯಕ್ರಮ

# ನಗರೀಕರಣದಿಂದ ಜನಪದ ಸಂಸ್ಕೃತಿ ನಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಜನಪದ ಸಂಸ್ಕೃತಿಯ ಮೂಲ ಬೇರು ರೈತನಲ್ಲಿದೆ. ಉತ್ತಿ ಬಿತ್ತಿ ಬೆಳೆಯುವ ಎಲ್ಲ ಸಂದರ್ಭಗಳಲ್ಲಿ ರೂಪುಗೊಂಡ ಸಾಹಿತ್ಯ ಜನಪದವಾಗಿದೆ. ಮಣ್ಣಿನ ವಾಸನೆ ಈ ಸಾಹಿತ್ಯದಲ್ಲಿದೆ. ಆದರೆ ಇಂದು ನಗರೀಕರಣದ ಪ್ರಭಾವದಿಂದ ಜನಪದ ಸಂಸ್ಕೃತಿ ಕಣ್ಮರೆಯಾಗುತ್ತಿದೆ ಎಂದು ಪ್ರೊ. ಚಂದ್ರಶೇಖರ ವಸ್ತ್ರದ ಅಭಿಪ್ರಾಯಪಟ್ಟರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ನಿರಂತರ ಪ್ರಕಾಶನ ಗದಗ, ತುಷಾರ ಪ್ರಕಾಶನನ ಕೊಪ್ಪಳ ಇವುಗಳ ಸಹಯೋಗದಲ್ಲಿ ಅರಹುಣಸಿಯ ರಮೇಶ ಕುರಿಯವರ ತೋಟದಲ್ಲಿ ಜರುಗಿದ ಸಾಹಿತ್ಯ ಕೂಟ 'ಒಕ್ಕಲಿಗನ ಒಳದನಿ-ನೆಲದ ಹಾಡು' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಹಳ್ಳಿ ಜೀವನದ ಬಾಲ್ಯವನ್ನು ತಮ್ಮ ಕವಿತೆಯಲ್ಲಿ ಪ್ರಸ್ತಾಪಿಸಿ, ಒಳಗೊಳ್ಳುವಿಕೆಯ ಸಂಸ್ಕೃತಿ ಪ್ರಬಲವಾಗಿದ್ದನ್ನು ನೆನಪಿಸಿಕೊಂಡರು.





ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮೈಸೂರ ತೋಟಗಾರಿಕೆವಿಶ್ವವಿದ್ಯಾಲಯದ ಪ್ರಾಧ್ಯಾಪಕ ಆರ್ ಸಿದ್ದಪ್ಪ, ನಿವೃತ್ತ ಹಿರಿಯ ತೋಟಗಾರಿಕೆ ನಿರ್ದೇಶಕ ಸುರೇಶ ಕುಂಬಾರ ಗದಗ, ಕೃಷಿ ವಿ.ವಿ. ಪ್ರಾಧ್ಯಾಪಕ ಎಸ್.ಎಲ್. ಪಾಟೀಲ, ಬೆಳವಟಗಿ ಕೃಷಿ ವಿ.ವಿ. ಪ್ರಾಧ್ಯಾಪಕ ಸಿ.ಎಂ. ರಫಿ ಮಾತನಾಡಿ, ಕೃಷಿ ಪ್ರಧಾನ ದೇಶವಾದ ಭಾರತದಲ್ಲಿ ರೈತರು ಕಾಲಕ್ಕೆ ತಕ್ಕಂತೆ ಒಕ್ಕಲುತನದಲ್ಲಿ ಬದಲಾವಣೆಗಳನ್ನು ಮಾಡಿಕೊಳ್ಳಬೇಕು. ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸುವ ಹಿನ್ನೆಲೆಯಲ್ಲಿ ಸಾವಯವ ಕೃಷಿಯಡೆಗೆ ಮುಖ ಮಾಡಬೇಕು. ನಮಗೆ ಬೇಕಾದ ತರಕಾರಿ, ಹಣ್ಣ ಹಂಪಲಗಳನ್ನು ನಾವೇ ಬೆಳೆದುಕೊಳ್ಳುವ ದಿಸೆಯಲ್ಲಿ ಪ್ರಯತ್ನಿಸಬೇಕು. ಸರಕಾರದ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ಕೃಷಿಯಲ್ಲಿ ಖುಷಿ ಕಾಣಬೇಕೆಂದರು.

ವೇದಿಕೆ ಮೇಲೆ ಡಾ. ಜಿ.ಬಿ. ಪಾಟೀಲ, ನಿವೃತ್ತ ಕೃಷಿ ಅಧಿಕಾರಿ ವಿ.ಎಸ್.ಮ್ಯಾಗೇರಿ, ರೈತ ಸಂಘದ ಜಿಲ್ಲಾಧ್ಯಕ್ಷ ಮುತ್ತನಗೌಡ ಚೌಡರಡ್ಡಿ, ಗ್ರಾ.ಪಂ ಸದಸ್ಯ ನಾಗರಾಜ ಗುದ್ನೆಪ್ಪನವರ, ವಿ.ಕೆ. ಪಾಟೀಲ, ರೋಣ ತಾಲೂಕಾ ಕಸಾಪ ಅಧ್ಯಕ್ಷ ರಮಾಕಾಂತ ಕಮತಗಿ ಮೊದಲಾದವರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಧಾರವಾಡದ ಕೃಷಿ ವಿಶ್ವವಿದ್ಯಾಲಯದ ಕೃಷಿ ಮೇಳದಲ್ಲಿ 2024ನೇ ಸಾಲಿನ ಶ್ರೇಷ್ಠ ಕೃಷಿಕ ಮಹಿಳೆ ಪ್ರಶಸ್ತಿ ಪುರಸ್ಕೃತರಾದ ಶಿಲ್ಪಾ ರಮೇಶಕುರಿ (ಮ್ಯಾಗೇರಿ) ದಂಪತಿಗಳನ್ನು ಸನ್ಮಾನಿಸಲಾಯಿತು.

ಕವಿ ಎ.ಎಸ್. ಮಕಾನದಾರ ಆಶಯ ನುಡಿಗಳನ್ನಾಡಿದರು. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕಲಾವಿದ ಶರಣಪ್ಪ ವಡಿಗೇರಿ ರೈತಗೀತೆ ಹಾಡಿದರು. ರಮೇಶ ಕುರಿ ಸ್ವಾಗತಿಸಿದರು. ಶಿವಾನಂದ ಗಿಡ್ನಂದಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ರೈತರು, ಪರಿಷತ್ತಿನ ಪದಾಧಿಕಾರಿಗಳು, ಸದಸ್ಯರು ಭಾಗವಹಿಸಿದ್ದರು.

> ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮದು ಮಣ್ಣಿನ ಸಂಸ್ಕೃತಿ. ಹಬ್ಬಗಳು, ಆಚಾರಗಳು ಎಲ್ಲವೂ ಮಣ್ಣಿನೊಂದಿಗೆ ಅವಿನಾಭಾವ ಸಂಬಂಧ ಹೊಂದಿದೆ. ಕೃಷಿ ಚಟುವಟಿಕೆಗಳಲ್ಲಿ ಸಾಧನೆ ಮಾಡಿರುವ ವ್ಯಕ್ತಿಗಳನ್ನು ಇಂದಿನ ಯುವಕರಿಗೆ ಪರಿಚಯಿಸುವ ಮತ್ತು ಸಂವಾದ ಏರ್ಪಡಿಸುವ ಕಾರ್ಯವನ್ನು ಕೃಷಿ ಮತ್ತು ತೋಟಗಾರಿಕೆ ಇಲಾಖೆ ಮಾಡುವದು ಇಂದಿನ ತುರ್ತು ಅಗತ್ಯವಾಗಿದೆ. ರೈತರಿಗೆ ಪ್ರೇರಣೆ ಮತ್ತು ಪ್ರೋತ್ಸಾಹವನ್ನು ನೀಡುವ ಹಿನ್ನೆಲೆಯಲ್ಲಿ ಕಸಾಪ ಇಂದಿನ ಕಾರ್ಯಕ್ರಮಗಳಿಗೆ ಅಣಿಯಾಗಿದೆ ಎಂದರು.



ಗದಗ ತಾಲೂಕಿನ ನರಸಾಪುರ ಗ್ರಾಮದ ಗ್ರಾಮದೇವತೆ ಶ್ರೀ ಲಕ್ಕಮ್ಮದೇವಿಗೆ ದಸರಾ ಹಬ್ಬದ ನಿಮಿತ್ತ ಸೋಮವಾರ ವಿಶೇಷ ಅಲಂಕಾರ ಮತ್ತು ಪೂಜೆಯನ್ನು ನೆರವೇರಿಸಲಾಯಿತು.



ಇತ್ತೀಚೆಗೆ ಸುರಿದ ಭಾರೀ ಮಳೆ-ಗಾಳಿಗೆ ಲಕ್ಕುಂಡಿಯ ನೀರಾವರಿ ಜಮೀನಿನಲ್ಲಿ ಬೆಳೆದ ಗೋವಿನ ಜೋಳದ ಬೆಳೆ ನೆಲಕಚ್ಚಿದ್ದು, ಲಕ್ಷಾಂತರ ರೂ ನಷ್ಟವಾಗಿದೆ. ಗ್ರಾಮದ ಷಣ್ಮುಖಪ್ಪ ಕರಬಸಪ್ಪ ಕರಿಯಲ್ಲಪ್ಪನವರ ಎಂಬ ರೈತನಿಗೆ ಸೇರಿದ್ದ 8 ಎಕರೆ ಗೋವಿನ ಜೋಳದ ಬೆಳೆಯು ಸಂಪೂರ್ಣ ನೆಲಕಚ್ಚಿದೆ. ಸುಮಾರು 5 ಲಕ್ಷ ರೂ ನಷ್ಟವಾಗಿದ್ದು, ಸಾಲ ಮಾಡಿ ಬೆಳೆ ಬೆಳೆಯಲಾಗಿತ್ತು. ಸರಕಾರ ಪರಿಹಾರ ನೀಡಬೇಕೆಂದು ರೈತ ವಿನಂತಿಸಿಕೊಂಡಿದ್ದಾನೆ.

### ಮುಡಾ ಹಗರಣ ಡೈವರ್ಟ್ ಮಾಡಲು ಜಾತಿಗಣತಿ ತಂದಿದ್ದಾರೆ

# ಕಾಂಗ್ರೆಸ್ ವಿರುದ್ಧ ಗದಗನಲ್ಲಿ ಶೆಟ್ಟರ್ ಕಿಡಿ!

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರ ಬಿದ್ರು ಪರವಾಗಿಲ್ಲ ಜಾತಿಗಣತಿ ಬಿಡುಗಡೆ ಮಾಡಲಿ ಎಂಬ ಬಿ ಕೆ ಹರಿಪ್ರಸಾದ್ ಹೇಳಿಕೆಗೆ ಸಂಸದ ಜಗದೀಶ್ ಶೆಟ್ಟರ್ ಪ್ರತಿಕ್ರಿಯೆ ಕೊಟ್ಟಿದ್ದಾರೆ.

ಈ ಸಂಬಂಧ ಗದಗನಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರ ಮೇಲೆ ಹರಿಪ್ರಸಾದ್ ಸಿಟ್ಟು ಇದೆ. ಹೆಂಗಾದ್ರು ಅವರನ್ನ ಕೆಳಗೆ ಇಳಿಸೋಣ ಅಂತ ಪ್ಲಾನ್ ಮಾಡಿರಬಹುದು.

ಹರಿಪ್ರಸಾದ್ ಅವರನ್ನ ಮಂತ್ರಿ ಮಾಡಲಿಲ್ಲ ಆ ಕಾರಣಕ್ಕೆ ಭಯಂಕರ ಸಿಟ್ಟು ಇದೆ. ಸಿದ್ದರಾಮಯ್ಯ ಅವರು ರಾಜಿ ಮಾಡಿಕೊಂಡಿಲ್ಲ. ಈ ನೆಪದ ಮೇಲಾದ್ರು ಸಿದ್ದರಾಮಯ್ಯನ ಮನೆಗೆ ಕಳುಹಿಸುವ ತಂತ್ರ ಹರಿ ಪ್ರಸಾದ್ ಮಾಡಿದ್ದಾರೆ ಎಂದರು.



ಜಾತಿಗಣತಿ ಆಗುವುದರ ಬಗ್ಗೆ ಎಲ್ಲರೂ ಒಪ್ಪಿಕೊಂಡಿದ್ದಾರೆ. 10 ವರ್ಷಕ್ಕೊಮ್ಮೆ ಜನಗಣತಿ ಆಗಬೇಕಲ್ಲ. ಅದ್ರಲ್ಲಿ ಜಾತಿಗಣತಿ ಆಗಬೇಕು. ಖಖಖ ಇದನ್ನೇ ಹೇಳಿದೆ. ಜಾತಿವಾರು ಜನಗಣತಿ ಮಾಡಿದ್ರು ಸರಿ ಇದೆ. ಜಾತಿಗಣತಿ ಮಾಡಬೇಕು ಬಿಡಬೇಕು ಅನ್ನೋ ಪ್ರಶ್ನೆ ಇಲ್ಲ. ಈ ಹಿಂದೆ ಹಿಂದುಳಿದ ಆಯೋಗ ಕಾಂತ ರಾಜು ಅವರನ್ನು ನೇಮಿಸಿದ್ರು. ಕಾಂತರಾಜು ವರದಿ ಬಂದ ಮೇಲೆ ತೆಗೆದುಕೊಳ್ಳಲಿಲ್ಲ. ಒತ್ತಾಯ ಪೂರ್ವಕವಾಗಿ ತೆಗೆದು-ಕೊಂಡಿದ್ದಾರೆ. ಸಿಎಂ ಅವರು ಕ್ರಮ ತಗೆದುಕೊಳ್ಳಬೇಕಲ್ಲ. ಬೇಡ ಅಂತಾ ರಿಜಕ್ಟ್ ಆದ್ರು ಮಾಡಬೇಕಲ್ಲ. ಜಾತಿಗಣತಿ ಬಿಡುಗಡೆ ಮಾಡದೆ ಎಲ್ಲವು ಅತಂತ್ರ ಮಾಡಿದ್ದಾರೆ. ಜಾತಿಗಣತಿ ವಿಚಾರವಾಗಿ ಡಿಬೇಟ್ ಮಾಡ್ತಾರೆ ಎಂದು ಶೆಟ್ಟರ್ ಕಿಡಿಕಾರಿದರು.

ಮುಡಾ ಹಗರಣ ಮುಚ್ಚಿ ಹಾಕಲು ಜಾತಿಗಣತಿ ತಂದಿದ್ದಾರೆ. ಜನ್ರ ಮನಸ್ಸು ಡೈವರ್ಟ್ ಮಾಡಲು ಈ ರೀತಿ ಮಾಡುತ್ತಿದ್ದಾರೆ. ಹಾಗಾದ್ರೆ ಕಾಂತರಾಜು ವರದಿ ಒಪ್ಪಿಕೊಳ್ಳಿ ಎಂದರು.

ಇನ್ನೂ ಕಾಂಗ್ರೆಸ್ ಸರ್ಕಾರ ಪ್ರಣಾಳಿಕೆಯಲ್ಲಿ ಜಾತಿಗಣತಿ ಬಿಡುಗಡೆ ವಿಚಾರವಾಗಿ ಮಾತನಾಡಿದ ಶೆಟ್ಟರ್, ಪ್ರಣಾಳಿಕೆಯಲ್ಲಿದ್ರು ಯಾಕೆ ಬಿಡುಗಡೆ ಮಾಡಲಿಲ್ಲ. ಸಿಎಂ ಅವರಿಗೆ ಜಾತಿಗಣತಿ ಬಿಡುಗಡೆ ಮಾಡುವ ಮನಸ್ಸು ಇಲ್ಲ ಎಂದು ಇದೆ ವೇಳೆ ಜಗದೀಶ್ ಶೆಟ್ಟರ್ ಹೇಳಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಸೇರಿದಂತೆ ಮುಖಂಡರು ಇದ್ದರು.



ಗದಗ ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ನವರಾತ್ರಿ ಪ್ರಯುಕ್ತ ಕಲ್ಯಾಣೋತ್ಸವ ಭಾನುವಾರ ವಿಜೃಂಭಣೆಯಿಂದ ಜರುಗಿತು. ಈ ಸಂದರ್ಭದಲ್ಲಿ ನೂರಾರು ಭಕ್ತಾಧಿಗಳು ಪಾಲ್ಗೊಂಡಿದ್ದರು.

### 105 ಕೆ.ಜಿ ತೂಕದ ಜೋಳದ ಚೀಲ ಹೊತ್ತು ದೀರ್ಘದಂಡ ನಮಸ್ಕಾರ

# ಕಲಿಯುಗದ ಭೀಮನಿಗೆ ಬಹುಪರಾಕ್!




■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಅಬ್ಬಿಗೇರಿ ಗ್ರಾಮದಲ್ಲಿ ನಡೆಯುತ್ತಿರುವ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ಸಮಾರಂಭದ ವೇದಿಕೆಯ ಮೇಲೆ ರವಿವಾರ ಗ್ರಾಮದ ಮಲ್ಲಪ್ಪ ಬಸಪ್ಪ ಬಿಲ್ಲಾರ ಒಂದು ಕ್ವಿಂಟಲ್ 5 ಕೆ.ಜಿ ತೂಕದ ಜೋಳದ ಚೀಲವನ್ನು ಬೆನ್ನ ಮೇಲೆ ಹೊತ್ತು ದೀರ್ಘದಂಡ ನಮಸ್ಕಾರ ಹಾಕಿ ಶ್ರೀಮದ್ ಜಗದ್ಗುರುಗಳಿಗೆ ತಮ್ಮ ಭಕ್ತಿಯನ್ನು ಸಮರ್ಪಿಸಿದರು.

ಈ ದೃಶ್ಯವನ್ನು ನೆರದಿದ್ದ ಭಕ್ತ ಸಮೂಹ ಕುತೂಹಲದಿಂದ ವೀಕ್ಷಿಸಿ, ಮೆಚ್ಚಿ ಚಪ್ಪಾಳೆ ತಟ್ಟಿದರು. ಇವರ ಸಾಧನೆಯನ್ನು ಕಂಡ ಬಾಳೆಹೊನ್ನೂರು ಶ್ರೀಮದ್ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳವರು ಮಲ್ಲಪ್ಪ ಅವರನ್ನು ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ವೇದಿಕೆಯಲ್ಲಿ ನಾಡಿನ ವಿವಿಧ ಮಠಗಳ ಶ್ರೀಗಳು, ಸಂಸದ ಜಗದೀಶ ಶೆಟ್ಟರ, ಉದ್ದಿಮೆದಾರ ವಿಜಯ ಸಂಕೇಶ್ವರ ಸೇರಿದಂತೆ ಅನೇಕ ಗಣ್ಯ ಮಾನ್ಯರಿದ್ದರು.

### ಅ.ಭಾ. ವೀರಶೈವ ಮಹಾಸಭಾ ಗದಗ ಜಿಲ್ಲಾ ಘಟಕದ ಪದಾಧಿಕಾರಿಗಳ ಆಯ್ಕೆ

# ಸಂಘಟನೆಯೊಂದಿಗೆ ಸದಸ್ಯತ್ವ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ವೀರಶೈವ ಜನರಲ್ ಲೈಬ್ರರಿಯ ಆವರಣದಲ್ಲಿರುವ ಅಖಿಲ ಭಾರತ ವೀರಶೈವ ಮಹಾಸಭಾ ಗದಗ ಜಿಲ್ಲಾ ಘಟಕದ ಸಭೆಯು ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಅವರ ಅಧ್ಯಕ್ಷತೆಯಲ್ಲಿ ಜರುಗಿತು. ಇದೇ ಸಂದರ್ಭದಲ್ಲಿ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳನ್ನು ಅಧಿಕೃತವಾಗಿ ಘೋಷಿಸಲಾಯಿತು.

ಈಗಾಗಲೇ ಅಧ್ಯಕ್ಷ ಸ್ಥಾನಕ್ಕೆ ಶರಣಬಸಪ್ಪ ಗುಡಿಮನಿ ಅವರು ಅವಿರೋಧವಾಗಿ ಆಯ್ಕೆಯಾಗಿದ್ದು, ಉಪಾಧ್ಯಕ್ಷರಾಗಿ ಬಸವರಾಜ ಅಂಗಡಿ, ಭೀಮರಡ್ಡೆಪ್ಪ ರಡ್ಡೇರ, ವಿಜಯಲಕ್ಷ್ಮೀ ಮಾನ್ವಿ, ಚನ್ನಯ್ಯ ಸಂಗಳಮಠ, ಪ್ರಧಾನ ಕಾರ್ಯದರ್ಶಿಯಾಗಿ ಮುರುಘರಾಜೇಂದ್ರ ಬಡ್ನಿ, ಕೋಶಾಧ್ಯಕ್ಷರಾಗಿ ಚನ್ನವೀರಪ್ಪ ಹುಣಶೀಕಟ್ಟಿ, ಕಾರ್ಯದರ್ಶಿಯಾಗಿ ಕಾಶಪ್ಪ ಗದಗಿನ, ಸುವರ್ಣಾ ಶೆಲ್ಲಿಕೇರಿ, ನಿರ್ಮಲಾ ಚಿಕ್ಕನಗೌಡ್ರ ಹಾಗೂ ಸಿದ್ಧಲಿಂಗಪ್ಪ ಪಟ್ಟಣಶೆಟ್ಟಿ ಅವರನ್ನು ಜಿಲ್ಲಾ ಸಮಿತಿಯ ಸರ್ವ ನಿರ್ದೇಶಕರ ಸಭೆಯಲ್ಲಿ ಆಯ್ಕೆ ಮಾಡಲಾಯಿತು.




ಕಟ್ಟಡ ಸಮಿತಿಯ ಅಧ್ಯಕ್ಷರಾಗಿ ಸದಾಶಿವಯ್ಯ ಮದರಿಮಠ, ಕಾರ್ಯದರ್ಶಿಯಾಗಿ ಕಿರಣ ಭೂಮಾ, ವಿಜಯಕುಮಾರ ಗಡ್ಡಿ, ಬಿ.ಬಿ. ಅಸೂಟಿ, ಸಿದ್ದಣ್ಣ ಮಾರನಬಸರಿ ಹಾಗೂ ಸಲಹಾ ಸಮಿತಿಗೆ ಚಂದ್ರು ಬಾಳಿಹಳ್ಳಿಮಠ, ವಿಜಯಕುಮಾರ ಗಡ್ಡಿ, ಬಿ.ಬಿ. ಅಸೂಟಿ, ಶಾಂತಣ್ಣ ಮುಳವಾಡ, ವಾಸು ಚಿಕ್ಕನಗೌಡ್ರ, ಎಸ್.ಬಿ. ಅಣ್ಣಿಗೇರಿ, ಕೆ.ವ್ಹಿ. ಗದಗಿನ, ಡಾ. ಶೇಖರ ಸಜ್ಜನರ ಅವರನ್ನು ಆಯ್ಕೆ ಮಾಡಲಾಗಿದ್ದು ಅಗತ್ಯವೆನಿಸಿದರೆ ಇನ್ನೂ ಕೆಲವರನ್ನು ಸೇರಿಸಿಕೊಳ್ಳುವ ಅಧಿಕಾರವನ್ನು ಅಧ್ಯಕ್ಷರಿಗೆ ನೀಡಲಾಯಿತು.

ಡಾ. ಶೇಖರ ಸಜ್ಜನರ ಹಾಗೂ ಎಂ.ಎಸ್. ಮಲ್ಲಾಪೂರ ಸೇರಿದಂತೆ ಹಲವರು ಸಂಘಟನೆ ಬಲವರ್ಧನೆಗೆ ಸಲಹೆ-ಸೂಚನೆ ನೀಡಿ, ನೂತನ ಪದಾಧಿಕಾರಿಗಳು ಸಂಘಟಿತರಾಗಿ ಒಮ್ಮತದಿಂದ ಕಾರ್ಯ ನಿರ್ವಹಿಸಬೇಕೆಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಸಭೆಯಲ್ಲಿ ಸಂಗನಗೌಡ ಪಾಟೀಲ, ಬಸವರಾಜ ಬಿಳೇಯಲಿ, ನಾರಾಯಣಪೂರ, ಸಿದ್ದು ಪಲ್ಲೇದ, ಶ್ರೀಶೈಲಪ್ಪ ಚಳಗೇರಿ, ಚನ್ನಬಸಪ್ಪ ಕಂಠಿ, ಬಸನಗೌಡ ಪಾಟೀಲ, ಮುತ್ತನಗೌಡ ತೇಜಿಗೌಡ್ರ, ವಿಜಯಾನಂದ ಮುತ್ತಿನಪೆಂಡಿಮಠ, ಬಾಪೂಜಿ ಪಾಟೀಲ, ಶಿವಪ್ಪ ಅಂಕದ, ಉಮಾದೇವಿ ಕಾತರಕಿ, ಉಮಾದೇವಿ ನಾಯ್ಕರ, ಜಯಶ್ರೀ ಉಗಲಾಟದ ಮುಂತಾದವರಿದ್ದರು.

# ಕ್ರೀಡೆಯಲ್ಲಿ ವಿಕಲಚೇತನ ಮಕ್ಕಳ ಸಾಧನೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇತ್ತೀಚೆಗೆ ಬಾಗಲಕೋಟೆಯಲ್ಲಿ ನಡೆದ 14ನೇ ರಾಜ್ಯಮಟ್ಟದ ಕಿವುಡ ಮಕ್ಕಳ ಕ್ರೀಡಾಕೂಟದಲ್ಲಿ ಪಟ್ಟಣದ ಬಿ.ಡಿ. ತಟ್ಟಿ (ಅ)ಕಿವುಡು ಮಕ್ಕಳ ವಸತಿಶಾಲೆಯ ಒಟ್ಟು 20 ವಿದ್ಯಾರ್ಥಿಗಳು ಭಾಗವಹಿಸಿ ಉತ್ತಮ ಸಾಧನೆ ಮಾಡಿ ಗಮನ ಸೆಳೆದಿದ್ದಾರೆ.

ಶಾಲೆಯ ದಯಾನಂದ ತಳವಾರ 200 ಮೀಟರ್ ಓಟ (ಪ್ರಥಮ), ಪ್ರವೀಣ ಭಗವಾನ ಚಕ್ರ ಎಸೆತ (ಪ್ರಥಮ), ರೇಣುಕಾ ಹೂಲಿಹೊಂಡ 100 ಮೀಟರ್ ಓಟ (ತೃತೀಯ), ಶಿವಪ್ಪ ವಿಭೂತಿ ಗುಂಡು ಎಸೆತ (ತೃತೀಯ) ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.


ಈ ಕ್ರೀಡಾಕೂಟದಲ್ಲಿ ಮಕ್ಕಳ ಜೊತೆಗೆ ಗದಗ ಜಿಲ್ಲೆಯ ಕಿವುಡರ ಸಂಘದ ಸದಸ್ಯ ಹನುಮಂತ ಡಂಬಳ, ಕ್ರೀಡಾಕೂಟದಲ್ಲಿ ಸಂಜ್ಞೆ ಭಾಷೆ ತುರ್ಜುಮೆ ಮಾಡಿದ ಶಿಕ್ಷಕಿಯರಾದ ಶ್ರೀದೇವಿ ಪಟ್ಟೇದ, ಹೊನ್ನನಾಯ್ಕರ, ತರಬೇತುದಾರ ಗಿರೀಶ ಜಿಡ್ಡಿಮನಿ ಭಾಗವಹಿಸಿದ್ದರು. ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಗೌರವ ಕಾರ್ಯದರ್ಶಿ ಸೋಮನಾಥ ಮಹಾಜನಶೆಟ್ಟರ, ಆಡಳಿತ ಮೇಲ್ವಿಚಾರಕ ಬಿ.ಬಿ. ಹುಬ್ಬಳ್ಳಿ , ಮುಖ್ಯ ಗುರುಗಳಾದ ಜಯಶ್ರೀ ಶೆಟ್ಟರ, ಪ್ರತಿಮಾ ಮಹಾಜನಶೆಟ್ಟರ, ಜಿ.ಪಿ. ಪವಾರ, ಸೇರಿದಂತೆ ಶಿಕ್ಷಕ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

# ಆತ್ಮಹತ್ಯೆಗೆ ಶರಣಾದ ರೈತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಲಬಾಧೆ ತಾಳದೇ ತಾಲೂಕಿನ ಸೂರಣಗಿ ಗ್ರಾಮದ ರೈತ ನೀಲಪ್ಪ ನಾಗಪ್ಪ ಕುರುಬರ (60) ಆತ್ಮಹತ್ಯೆ ಮಾಡಿಕೊಂಡ ಘಟನೆ ಸೋಮವಾರ ನಡೆದಿದೆ.

ಗ್ರಾಮದ ಗ್ರಾಮೀಣ ವಿಕಾಸ ಬ್ಯಾಂಕ್‌ನಲ್ಲಿ 3 ಲಕ್ಷ ರೂ ಕೃಷಿಸಾಲ ಮಾಡಿಕೊಂಡಿದ್ದ ರೈತ, ಈ ವರ್ಷ ತಮ್ಮ 3 ಎಕರೆ ಜಮೀನಿನಲ್ಲಿ ಬಿತ್ತನೆ ಮಾಡಿದ್ದ ಗೋವಿನಜೋಳದ ಬೆಳೆಯೂ ವಿಫಲವಾಗಿತ್ತು. ಸಾಲ ತೀರಿಸುವುದು ಹೇಗೆಂಬ ಚಿಂತೆಯಿಂದ ಮನನೊಂದ ರೈತ ಮನೆಯಲ್ಲಿ ನೇಣಿಗೆ ಶರಣಾಗಿದ್ದಾನೆ. ಈ ಕುರಿತು ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಕೇಂದ್ರದ ರೈಲ್ವೆ ಸಚಿವರಾದ ವಿ.ಸೋಮಣ್ಣ ಗದಗ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ಬಿಜೆಪಿ ಧುರೀಣ ಕಾಂತೀಲಾಲ ಬನ್ಸಾಲಿ ಸಚಿವರನ್ನು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಈಶ್ವರಪ್ಪ ಮುನವಳ್ಳಿ, ಉಗಲಾಟ, ಆದಪ್ಪಗೌಡ್ರ ಹಾಗು ಇನ್ನೂ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

### ಎಚ್‌ಸಿಇಎಸ್ ಸಂಸ್ಥೆಯಿಂದ ವ್ಯಾಜ್ಯಮುಕ್ತ ಗ್ರಾಮಕ್ಕಾಗಿ ಜಾಗೃತಿ ಅಭಿಯಾನ: ಎಸ್.ಕೆ. ಪಾಟೀಲ್

# ವ್ಯಾಜ್ಯಮುಕ್ತ ಗ್ರಾಮಕ್ಕಾಗಿ ಸಚಿವರ ದೃಢಸಂಕಲ್ಪ

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಎಚ್.ಸಿ.ಇ.ಎಸ್. ಕಾನೂನು ಮಹಾವಿದ್ಯಾಲಯದ ಕಾನೂನು ಅರಿವು-ನೆರವು ಮತ್ತು ಮಾನವಹಕ್ಕುಗಳ ಘಟಕದಿಂದ 'ವ್ಯಾಜ್ಯಮುಕ್ತ ಗ್ರಾಮ'ಕ್ಕಾಗಿ ಗ್ರಾಮಗಳನ್ನು ದತ್ತು ಪಡೆದು, ಆ ಗ್ರಾಮಗಳಲ್ಲಿ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ. ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಗೊಜನೂರ, ಶ್ಯಾಬಳ, ಸಂಕನಾಳ ಮತ್ತು ಕೊಂಡಿಕೊಪ್ಪ ಗ್ರಾಮಗಳನ್ನು ದತ್ತು ಪಡೆದಿದ್ದು, ಆ ಗ್ರಾಮಗಳನ್ನು ವಿಶೇಷವಾಗಿ ಕೇಂದ್ರೀಕರಿಸಿ, ಅಲ್ಲಿನ ಜನರೊಂದಿಗೆ ಸಂವಾದ, ಚರ್ಚೆ ಮೂಲಕ 'ವ್ಯಾಜ್ಯ ಮುಕ್ತ' ಗ್ರಾಮಕ್ಕೆ ಅವರ ಸಹಕಾರದ ಬಗ್ಗೆ ತಿಳಿವಳಿಕೆ ಹೇಳಲಾಗುತ್ತಿದೆ ಎಂದು ಎಸ್.ಕೆ. ಪಾಟೀಲ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದ ಕಾನೂನು, ನ್ಯಾಯ, ಶಾಸನ ರಚನೆ, ಮಾನವ ಹಕ್ಕುಗಳು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಕೆ ಪಾಟೀಲರು ಗ್ರಾಮ ನ್ಯಾಯಾಲಯಗಳ ಕಾಯ್ದೆಯ ಅನ್ವಯ ಗ್ರಾಮ ನ್ಯಾಯಾಲಯಗಳನ್ನು ಸ್ಥಾಪಿಸಿ ನ್ಯಾಯ ಒದಗಿಸುವಲ್ಲಿ ಆಗುತ್ತಿರುವ ವಿಳಂಬವನ್ನು ತಪ್ಪಿಸುವುದು, ನ್ಯಾಯ ವಿತರಣೆ ವ್ಯವಸ್ಥೆಯನ್ನು ಗ್ರಾಮ ಮಟ್ಟದ ಜನರ ಬಾಗಿಲಿಗೆ ಕೊಂಡೊಯ್ಯುವುದು ಮತ್ತು ಯಾವುದೇ ವ್ಯಕ್ತಿ ನ್ಯಾಯ ಪಡೆಯುವಲ್ಲಿ ವಂಚಿತನಾಗಬಾರದು ಎನ್ನುವ ಉದ್ದೇಶ ಹೊಂದಿದ್ದಾರೆ. ಕಾನೂನು ಸಚಿವರು ಕರ್ನಾಟಕದಲ್ಲಿರುವ ಎಲ್ಲಾ ಗ್ರಾಮಗಳಲ್ಲಿ ಗ್ರಾಮಸ್ಥರಲ್ಲಿನ ವ್ಯಾಜ್ಯಗಳನ್ನು ಮುಕ್ತಾಯಗೊಳಿಸಲು ದೃಢಸಂಕಲ್ಪ ಮಾಡಿ ಪ್ರಾಯೋಗಿಕವಾಗಿ ನಾಡಿನ ಕೆಲವು ಗ್ರಾಮಗಳನ್ನು ಆಯ್ಕೆ ಮಾಡಿಕೊಂಡು ವ್ಯಾಜ್ಯಮುಕ್ತ ಗ್ರಾಮ ಮಾಡಲು ಆನೇಕ ಯೋಜನೆಗಳನ್ನು ಹಾಕಿಕೊಂಡಿದ್ದಾರೆ ಎಂದರು.



ಮಾನವ ಸಮಾಜ ವಿಕಾಸದಲ್ಲಿ ನ್ಯಾಯಾಂಗ ಒಂದು ಸ್ವತಂತ್ರ ಶಕ್ತಿಯಾಗಿ ಬೆಳೆದುಬಂದಿದೆ. ಇಂದಿನ ಇವತ್ತು ನ್ಯಾಯಾಂಗ ಇಲ್ಲದ್ದಿದ್ದರೆ ನಾಗರಿಕ ಸಮಾಜ ಅಲ್ಲೋಲಕಲ್ಲೋಲವಾಗುತ್ತಿತ್ತು. ಅನ್ಯಾಯಕ್ಕೆ ಒಳಗಾದವರು ನ್ಯಾಯಾಲಯದ ಮೂಲಕ ನ್ಯಾಯವನ್ನು ಪಡೆಯುತ್ತಿದ್ದಾರೆ. ಆದರೂ ಇನ್ನೂ ಅನೇಕ ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಇವೆ.

ಶಾಂತಿ ಇರುವೆಡೆ ಅಭಿವೃದ್ಧಿ ಇರುತ್ತದೆ. ಜನರಿಗೆ ನ್ಯಾಯ ಸಿಕ್ಕರೆ ಅವರು ತೃಪ್ತಿ ಪಡುತ್ತಾರೆ.

ನ್ಯಾಯ ದೊರಕಿಸಿಕೊಳ್ಳುವಲ್ಲಿ ಸೋತರೆ ಅವರು ಅಸಮಾಧಾನಗೊಳ್ಳುತ್ತಾರೆ. ಬಡವ-ಬಲ್ಲಿದ, ಅನಕ್ಷರಸ್ಥರು, ಸಬಲ-ದುರ್ಬಲರೆಂಬ ಬೇಧ-ಭಾವವಿಲ್ಲದೆ ನ್ಯಾಯ ದೊರಕಿಸಿಕೊಡುವ ಸಂಸ್ಥೆಗಳೆಂದರೆ ನ್ಯಾಯಾಲಯಗಳು. ಈಗಾಗಲೇ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ನವದೆಹಲಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರಗಳು ಜನರಿಗೆ ಕಾನೂನು ಅರಿವು-ನೆರವು ಜೊತೆಗೆ ಲೋಕ ಅದಾಲತ್‌ಗಳನ್ನು ಏರ್ಪಡಿಸಿ ರಾಜೀ ಮೂಲಕ ವ್ಯಾಜ್ಯಗಳನ್ನು ಇತ್ಯರ್ಥ ಮಾಡುತ್ತಾ ಬಂದಿರುವದು ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಹುಲಕೋಟಿ ಸಹಕಾರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಆರ್.ಎಂ. ಮೂಲಿಮನಿ, ಎಚ್.ಸಿ.ಇ.ಎಸ್. ಕಾನೂನು ಮಹಾವಿದ್ಯಾಲಯದ ಉಪಾಧ್ಯಕ್ಷ, ವಕೀಲ ಎಸ್.ಕೆ. ನದಾಫ್, ಮಹಾವಿದ್ಯಾಲಯದ ಪ್ರಾಚಾರ್ಯೆ ಪಲ್ಲವಿ ಎಸ್.ಬುಯ್ಯಾರ್, ಕಾನೂನು ಅರಿವು-ನೆರವು ಮತ್ತು ಮಾನವ ಹಕ್ಕುಗಳ ಘಟಕದ ಸಂಯೋಜಕಿ ನಾಜೀಮಾ ಎನ್.ಮುಲ್ಲಾ, ಸಹಾಯಕ ಉಪನ್ಯಾಸಕರಾದ ಎಸ್.ಐ ಅಣ್ಣಿಗೇರಿ, ಎನ್‌ಎಸ್‌ಎಸ್ ಘಟಕದ ಸಂಯೋಜಕ ಮಹಾಂತೇಶ ಕೊರಡಕೇರಿ, ಯೂಥ್ ರೆಡ್ ಕ್ರಾಸ್ ಘಟಕದ ಸಂಯೋಜಕ ವಿಶ್ವನಾಥ ಹಿರೇಮಠ, ಸಂಸ್ಕೃತಿಕ ವಿಭಾಗದ ಎಮ್.ವಿ. ಹಿರೇಮಠ, ಡಿ.ಎಲ್. ಕುಲಕರ್ಣಿ, ಸಂಗೀತಾ ಪಾಟೀಲ, ಬಸಮ್ಮ ಎಚ್, ಮಹಾಂತೇಶ ಮಡ್ಡಿ, ಅನುಸೂಯಾ ಕೇರಿ ಹಾಗೂ ಗ್ರಂಥಪಾಲಕ ಎನ್.ವಿ. ರಾಥೋಡ್ ಉಪಸ್ಥಿತರಿದ್ದರು.

> ವ್ಯಾಜ್ಯ ಮುಕ್ತ ಗ್ರಾಮದ ಪಿತಾಮಹ ಗಾಂಧೀಜಿ ಕಂಡ ಕನಸನ್ನು ಕಾನೂನು ಸಚಿವರಾದ ಡಾ. ಎಚ್.ಕೆ. ಪಾಟೀಲ ನನಸು ಮಾಡುವ ನಿರ್ಧಾರ ಕೈಗೊಂಡಿದ್ದಾರೆ. ನಾವು ಕೂಡ ನಮ್ಮ ಕಾನೂನು ಮಹಾವಿದ್ಯಾಲಯದಿಂದ ಪ್ರಾಯೋಗಿಕವಾಗಿ ಗದಗ ಜಿಲ್ಲಾ ಲಕ್ಷ್ಮೇಶ್ವರ ತಾಲೂಕಿನ ಗೊಜನೂರ, ಸಂಕದಾಳ, ಕೊಂಡಿಕೊಪ್ಪ ಮತ್ತು ಶ್ಯಾಬಳ ಗ್ರಾಮಗಳನ್ನು ಆಯ್ಕೆ ಮಾಡಿಕೊಂಡು ವ್ಯಾಜ್ಯಮುಕ್ತ ಗ್ರಾಮ ಅಭಿಯಾನ ಕೈಗೊಂಡಿದ್ದು, ಮಾಧ್ಯಮದವರ ಸಹಕಾರ ಅಗತ್ಯವಾಗಿದೆ.
>
> **– ಎಸ್.ಕೆ. ನದಾಫ್.**
> ವಕೀಲರು, ಉಪಾಧ್ಯಕ್ಷರು ಎಚ್‌ಸಿಇಎಸ್
> ಕಾನೂನು ಮಹಾವಿದ್ಯಾಲಯ.

# ರೈತನ ಬದುಕಿಗೆ ಕಹಿಯಾದ ಕಬ್ಬು

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇತ್ತೀಚೆಗೆ ಸುರಿದ ಭಾರೀ ಗಾಳಿ-ಮಳೆಗೆ ಇಲ್ಲಿಯ ಜಮೀನೊಂದರಲ್ಲಿ ಬೆಳೆದ ಕಬ್ಬು ಬುಡ ಸಮೇತ ನೆಲಕ್ಕುರಳಿದ್ದು, ಲಕ್ಷಾಂತರ ರೂ ನಷ್ಟವಾಗಿದೆ.

ಐತಿಹಾಸಿಕ ಮುಸ್ಕಿನಭಾವಿ ಹತ್ತಿರವಿರುವ ಹಾಲ್ಲಪ್ಪ ಮುಸ್ಕಿನಬಾವಿ ಎಂಬ ರೈತನ 2 ಎಕರೆ 12 ಗುಂಟೆ ನೀರಾವರಿ ಜಮೀನಿನಲ್ಲಿ ಸಸಿ, ಗೊಬ್ಬರ, ಕ್ರಿಮಿನಾಶಕ ಸೇರಿ ಈವರೆಗೆ 90 ಸಾವಿರ ರೂ ಖರ್ಚು ಮಾಡಿ ಕಬ್ಬು ಬೆಳೆದಿದ್ದ. 7 ತಿಂಗಳಿಂದ ಬೆಳೆಯಲಾಗಿದ್ದ ಬೆಳೆಯು ಸುಮಾರು 8 ಅಡಿ ಎತ್ತರ ಬೆಳೆದು ನಿಂತಿತ್ತು. ಬರುವ ದೀಪಾವಳಿ ಹಬ್ಬಕ್ಕೆ ಕಟಾವು ಮಾಡಿ ಮಾರಾಟ ಮಾಡಲಾಗಿ, ಸುಮಾರು 3 ಲಕ್ಷ ರೂ ಆದಾಯದ ನಿರೀಕ್ಷೆಯಿತ್ತು. ಇದೀಗ ಪ್ರಕೃತಿ ವಿಕೋಪದಿಂದ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದ್ದು, ವರುಣನ ಅರ್ಭಟಕ್ಕೆ ಬೆಳೆ ನಷ್ಟವಾಗಿದ್ದನ್ನು ಕಂಡು ರೈತ ಕಣ್ಣೀರಿಟ್ಟಿದ್ದಾನೆ. ಜೀವನದ ಆರ್ಥಿಕ ಸಂಕಷ್ಟಕ್ಕೆ ಸಿಹಿಯಾಗಬೇಕಾಗಿದ್ದ ಕಬ್ಬು ಕಹಿಯಾಗಿ ಪರಿಣಮಿಸಿದ್ದು, ಸರಕಾರ ನಮ್ಮ ನೆರವಿಗೆ ಧಾವಿಸಬೇಕು ಎಂದು ರೈತ ಹಾಲ್ಲಪ್ಪ ವಿನಂತಿಸಿಕೊಂಡಿದ್ದಾನೆ.



# ಶಾಸಕ ರೆಡ್ಡಿ ವಿರುದ್ಧ ಕ್ರಮಕ್ಕೆ ಆಗ್ರಹ



**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಸಿಎಂ ಸಿದ್ದರಾಮಯ್ಯ ಆಗಮನದ ಸಂದರ್ಭದಲ್ಲಿ ಝೀರೋ ಟ್ರಾಫಿಕ್ ಹಾಗೂ ಕಾನ್ ವೇ ನಿಯಮ ಉಲ್ಲಂಘಿಸಿ ದುರಹಂಕಾರ ಮೆರೆದ ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿ ವಿರುದ್ಧ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಬೇಕೆಂದು ರಾಷ್ಟ್ರೀಯ ಸಂಗೊಳ್ಳಿ ರಾಯಣ್ಣ ಸೇನೆ ಸದಸ್ಯರು ಆಗ್ರಹಿಸಿ ಎಸ್ಪಿ ರಾಮ್ ಎಲ್ ಅರಸಿದ್ದಿ ಅವರಿಗೆ ಮನವಿ ಸಲ್ಲಿಸಿದರು .

ಈ ವೇಳೆ ಮಾತನಾಡಿದ ರಾಷ್ಟ್ರೀಯ ಸಂಗೊಳ್ಳಿ ರಾಯಣ್ಣ ಸೇನೆಯ ಕೊಪ್ಪಳ ತಾಲೂಕಾ ಅಧ್ಯಕ್ಷ ಕುಬೇರ ಮಜ್ಜಿಗಿ ಮಾತನಾಡಿ, ಅ.5 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಿಂಧನೂರಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ ಮರಳಿ ಗಂಗಾವತಿ ಮೂಲಕ ಜಿಂದಾಲ್ ವಿಮಾನ ನಿಲ್ದಾಣಕ್ಕೆ ಹೊರಟಿದ್ದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಬರುವ ಕೆಲವೇ ಸೆಕೆಂಡುಗಳ ಮೊದಲು ಎಡ ಬದಿ ಇದ್ದ ಗಂಗಾವತಿ ಶಾಸಕ ಜನಾರ್ದನ ರೆಡ್ಡಿ ಅವರ ಕಾರು ದಿಡೀರನೆ ಡಿವೈಡರ್ ದಾಟಿ ವನ್ ವೇ ರಸ್ತೆಯಲ್ಲಿ ಚಲಾಯಿಸಿದ್ದಾರೆ. ಅದು ಕೂಡ ಜೀರೋ ಟ್ರಾಫಿಕ್ ಹಾಗೂ ಕಾನ್ ವೇ ಜಾರಿಯಲ್ಲಿದ್ದ ಸಂದರ್ಭದಲ್ಲಿ ಈ ರೀತಿ ದುರ್ವರ್ತನೆ ತೋರಿದ್ದು ಜನಾರ್ದನ ರೆಡ್ಡಿ ಅವರ ದರ್ಪ ಹಾಗೂ ದುರಹಂಕಾರವನ್ನು ಎತ್ತಿ ತೋರಿಸುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೆಡ್ಡಿ ಅವರ ಒಂದು ಕಾರು ಅಲ್ಲದೆ ಅವರ ಬೆಂಬಲಿಗರ 2 ಕಾರುಗಳು ಸಹ ಅವರನ್ನು ಹಿಂಬಾಲಿಸಿವೆ. ಅದೃಷ್ಟವಶಾತ್ ಈ ಅವಘಡದಿಂದ ನಡೆಯಬೇಕಿದ್ದ ಭಾರೀ ಅನಾಹುತ ಕೂದಲೆಳೆಯ ಅಂತರದಲ್ಲಿ ತಪ್ಪಿದೆ.

ಸಿದ್ದರಾಮಯ್ಯನವರ ವಿರುದ್ಧ ದ್ವೇಷದ ರಾಜಕಾರಣ ಮಾಡುತ್ತಾ ಬಂದಿರುವುದನ್ನು ಗಮನಿಸಿದ್ದೇವೆ. ಹಾಗಾಗಿ ಸಿದ್ದರಾಮಯ್ಯನವರ ಜೀವಕ್ಕೆ ಧಕ್ಕೆ ತರುವ ದುರುದ್ದೇಶ ಕಂಡು ಬರುತ್ತದೆ ರಾಜ್ಯದ ಮುಖ್ಯಮಂತ್ರಿಗಳಿಗೆ ಈ ರೀತಿ ಆದರೆ ಸಾಮಾನ್ಯರ ಗತಿ ಏನು ಎನ್ನುವ ಪ್ರಶ್ನೆ ಮೂಡುತ್ತದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಕಾನೂನು ಉಲ್ಲಂಘಿಸಿ ಮುಖ್ಯಮಂತ್ರಿಗಳ ಪ್ರಾಣಕ್ಕೆ ಕುತ್ತು ತರಲು ಯತ್ನಿಸಿದ ಜನಾರ್ದನ್ ರೆಡ್ಡಿ ಅವರ ವಿರುದ್ಧ ಪ್ರಕರಣ ದಾಖಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯ ಮಾಡಿದರು.

ಈ ಸಂದರ್ಭದಲ್ಲಿ ಮುಖಂಡ ರಾದ ಹನುಮಂತಪ್ಪ ಕೌದಿ, ಗವಿಸಿದ್ದಪ್ಪ ಮುದ್ದಿ, ಸೀಮಣ್ಣ ಗಬ್ಬೂರ, ಮಂಜುನಾಥ್ ಬಂಗಾಳಿ, ನಿಂಗಪ್ಪ ಮೂಗಿನ, ಮಲ್ಲೇಶ್ ಹದ್ದಿನ್, ಮಂಜುನಾಥ ಮ್ಯಾಗಳಮನಿ, ಆನಂದ ಹಳ್ಳಿಗುಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಒಳ ಮೀಸಲಾತಿ ಜಾರಿಗಾಗಿ ಹೋರಾಟ: ಬಿ. ಹುಸೇನಪ್ಪ ಸ್ವಾಮಿ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿ ಹೋರಾಟ ಸಮಿತಿ ವತಿಯಿಂದ ಒಳ ಮೀಸಲಾತಿ ಜಾರಿಗಾಗಿ ರಾಜ್ಯದಾದ್ಯಂತ ಅ.16ರಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ಮಾಡಲಾಗುವುದು ಎಂದು ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿ ಹೋರಾಟ ಸಮಿತಿಯ ರಾಜ್ಯ ಸಂಘಟನಾ ಸಂಚಾಲಕ ಬಿ. ಹುಸೇನಪ್ಪ ಸ್ವಾಮಿ ಮಾದಿಗ ಹೇಳಿದರು.

ನಗರದ ಕೆಯೂಡಬ್ಲ್ಯೂಜೆ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಪರಿಶಿಷ್ಟ ಜಾತಿಗಳಲ್ಲಿ ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಅತಿ ಹೆಚ್ಚು ಹಿಂದುಳಿದಿರುವ ಜಾತಿಗಳ ಅಭಿವೃದ್ಧಿಯ ಸದುದ್ದೇಶದಿಂದ ಆಯಾ ಜಾತಿಗಳಿಗೆ ಸೇರಿದವರಿಗೆ ಮೀಸಲಾತಿ ಸೌಲಭ್ಯ ತಲುಪಲು ಒಳ ಮೀಸಲಾತಿ ನೀಡುವ ಸಾಂವಿಧಾನಿಕ ಅಧಿಕಾರ ಆಯಾ ರಾಜ್ಯಗಳಿಗಿದೆ ಎಂದು ಸರ್ವೋಚ್ಚ ನ್ಯಾಯಾಲಯದ ಸಾಂವಿಧಾನಿಕ ಪೂರ್ಣ ಪೀಠವು ತೀರ್ಪು ನೀಡಿದೆ, ಪರಿಶಿಷ್ಟ ಜಾತಿಗಳು ಏಕರೂಪಿ ಸಮುದಾಯವು ಅಲ್ಲ ಎಂಬುದನ್ನು ಐತಿಹಾಸಿಕ ಮತ್ತು ಅನುಭವಕ್ಕೆ ದಕ್ಕುವ ಸಾಕ್ಷಿಗಳು ಹೇಳುತ್ತವೆ, ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗದ ವರದಿಯ ದತ್ತಾಂಶಗಳನ್ನು ಪರಿಗಣಿಸಿ ನ್ಯಾಯಮೂರ್ತಿ ಅಡಿಗ ರವರ ಸಲಹೆಯಂತೆ ಮಾಧುಸ್ವಾಮಿ ನೇತೃತ್ವದ ಸಂಪುಟ ಉಪಸಮಿತಿಯು ಕಾನೂನು ಬದ್ಧವಾಗಿ ಒಟ್ಟು ಶೇ.17% ರ ಮೀಸಲಾತಿಯಲ್ಲಿ ಪರಿಶಿಷ್ಟರಲ್ಲಿರುವ ಆಯಾ ಜಾತಿ ಸಂಬಂಧಿತ ಜಾತಿಗಳ ನಾಲ್ಕು ಗುಂಪು ಮಾಡಿ ಅವರವರ ಜಾತಿ ಜನಸಂಖ್ಯೆ ಆಧಾರವಾಗಿ ಒಳ ಮೀಸಲಾತಿಗೆ ಶಿಫಾರಸು ಮಾಡಿದೆ, ಸುಪ್ರೀಂ ಕೋರ್ಟ್ ತೀರ್ಪನ್ನು ಕೂಡಲೆ ರಾಜ್ಯ ಸರ್ಕಾರವು ಜಾರಿಗೊಳಿಸಬೇಕೆಂದು ಆಗ್ರಹಿಸಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಸರ್ಕಾರದ ಗಮನ ಸೆಳೆಯಲು ಬೃಹತ್ ಪ್ರತಿಭಟನೆ ಹಮ್ಮಿಕೊಂಡಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಡಿ.ಹುಲ್ಲೇಶ್ ಬೂದುಗುಂಪ, ಸಂಚಾಲಕ ಸಿದ್ದೇಶ್ ಪೂಜಾರ ದದೆಗಲ್,ಮುಖಂಡರಾದ ಮೈಲಪ್ಪ ಹೊಸಮನಿ, ಮಾರುತಿ, ಪಕೀರಪ್ಪ ಮಳ್ಳಿಕೇರಿ ಉಪಸ್ಥಿತರಿದ್ದರು.



### ಎಸ್‌ಎಸ್‌ಕೆ 'ನಮ್ಮೂರು ದಸರಾ' ಕಾರ್ಯಕ್ರಮದಲ್ಲಿ ಭಾಗಿಯಾದ ಸಂಸದ ಬಸವರಾಜ ಬೊಮ್ಮಾಯಿ

# ಸಂಸ್ಕೃತಿ, ಸಂಸ್ಕಾರವನ್ನು ಮುಂದುವರೆಸಬೇಕಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಇತಿಹಾಸ ಹಾಗೂ ಪರಂಪರೆಯಲ್ಲಿ ಜಗತ್ತಿನಲ್ಲಿಯೇ ಮುಂದಿರುವ ಭಾರತ ದೇಶದ ಸಂಸ್ಕಾರವನ್ನು ಉಳಿಸಿ, ಮುಂದುವರೆಸಿಕೊಂಡು ಹೋಗುವದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹಾವೇರಿ-ಗದಗ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರಬಾರ ವೇದಿಕೆಯಲ್ಲಿ ಜರುಗಿದ 'ನಮ್ಮೂರು ದಸರಾ-2024' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿ, ಧಾರ್ಮಿಕ ಆಚರಣೆಯಲ್ಲಿ ಎಸ್‌ಎಸ್‌ಕೆ ಸಮಾಜವು ತನ್ನದೇ ಆದ ಇತಿಹಾಸವನ್ನು ಹೊಂದಿದೆ. ದಸರಾ ಹಬ್ಬವನ್ನು ಅದ್ದೂರಿಯಾಗಿ ಆಚರಿಸಿಕೊಂಡು ಬರುತ್ತಿರುವ ಸಮಾಜ ಬಾಂಧವರಿಗೆ ಜಗನ್ಮಾತೆ ಯಶಸ್ಸು ನೀಡಲಿ ಎಂದು ಹಾರೈಸಿದರು. ಇದಕ್ಕೂ ಮುಂಚೆ ಅವರು ಜಗದಂಬಾ ದೇವಿ ಹಾಗೂ ತುಳಜಾಭವಾನಿ ದೇವಿಯ ದರ್ಶನ ಪಡೆದರು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಎಸ್.ಎಸ್.ಕೆ ಸಮಾಜ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ವಹಿಸಿದ್ದರು. ವೇದಿಕೆ ಮೇಲೆ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಪಂಚ ಕಮಿಟಿಯ ಉಪಾಧ್ಯಕ್ಷ ರಾಜು ಬದಿ, ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ, ಕಾರ್ಯದರ್ಶಿ ರವಿ ಶಿದ್ಲಿಂಗ, ದಸರಾ ಕಮಿಟಿಯ ಚೇರಮನ್ ವಿಷ್ಣುಸಾ ಶಿದ್ಲಿಂಗ ಉಪಸ್ಥಿತರಿದ್ದರು. ಬಲರಾಮ ಬಸವಾ ಪ್ರಾಸ್ತಾವಿಕವಾಗಿ ಮಾತನಾಡಿದರು.


ಈ ಸಂದರ್ಭದಲ್ಲಿ ಪಂಚ ಕಮಿಟಿಯ ಸದಸ್ಯರಾದ ಎನ್. ಆರ್. ಖಟವಟೆ, ವಿಶ್ವನಾಥಸಾ ಖಟವಟೆ, ಸುರೇಶಕುಮಾರ ಬದಿ, ಮಾರುತಿ ಪವಾರ, ಶ್ರೀನಿವಾಸ ಬಾಂಡಗೆ, ಶ್ರೀಕಾಂತ ಖಟವಟೆ, ಮೋತಿಲಾಲಸಾ ಪೂಜಾರಿ, ಪರಶುರಾಮಸಾ ಬದಿ, ಗಣಪತಸಾ ಜಿತೂರಿ, ವಿನೋಧ ಬಾಂಡಗೆ, ಪ್ರಕಾಶ ಬಾಕಳೆ, ಗಂಗಾಧರ ಹಬೀಬ, ಅಂಬಾಸಾ ಖಟವಟೆ, ವಿಶ್ವನಾಥ ಸೂಳಂಕಿ, ಸಾಗರ ಪವಾರ, ಸತೀಶ ದೇವಳೆ, ಶ್ರೀಕಾಂತ ಬಾಕಳೆ, ಮೋಹನಸಾ ಪವಾರ, ನಾಗರಾಜ ಖೋಡೆ, ಉಮಾಬಾಯಿ ಬೇವಿನಕಟ್ಟಿ, ಸ್ನೇಹಲತಾ ಕಬಾಡಿ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಜಿ.ಎನ್. ಹಬೀಬ ನಿರೂಪಿಸಿದರು. ಅನಿಲ್ ಖಟವಟೆ ವಂದಿಸಿದರು.

> ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಎಸ್‌ಎಸ್‌ಕೆ ಸಮಾಜ ಬಾಂಧವರು ಹಲವಾರು ವರ್ಷಗಳಿಂದ ದಸರಾ ಹಬ್ಬವನ್ನು ಅದ್ದೂರಿಯಾಗಿ ಆಚರಿಸಿಕೊಂಡು ಬರುತ್ತಿದ್ದಾರೆ. ದಸರಾ ಹಬ್ಬವನ್ನು ಎಲ್ಲರೂ ಮೈಸೂರಿನಲ್ಲಿ ನೋಡಲು ಹೋಗುತ್ತಿದ್ದರು. ಆದರೆ, ಗದಗ ಎಸ್‌ಎಸ್‌ಕೆ ಸಮಾಜ ಬಾಂಧವರು ನಾಡಹಬ್ಬ ದಸರಾ ಉತ್ಸವದ ಮಹತ್ವವನ್ನು ತಿಳಿಸಿಕೊಡುವಲ್ಲಿ ಯಶಸ್ವಿಯಾಗಿದ್ದಾರೆ. ಒಳ್ಳೆಯವರಿಗೆ ಉತ್ತಮ ಕಾಲ ಬಂದೇ ಬರುತ್ತದೆ ಎನ್ನುವದಕ್ಕೆ ದುಷ್ಟರನ್ನು ಸಂಹರಿಸಿ ಶಿಷ್ಟರನ್ನು ರಕ್ಷಿಸಿದ ಈ ದಸರಾ ಹಬ್ಬವೇ ಸಾಕ್ಷಿಯಾಗಿದೆ ಎಂದು ಹೇಳಿದರು.

### ವಿಭಾಗ ಮಟ್ಟದ ಖೋಖೋ

# ಹುಬ್ಬಳ್ಳಿ ಕೆಎಲ್‌ಇ ತಂಡಕ್ಕೆ ಜಯ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಜರುಗಿದ ಬೆಳಗಾವಿ ತಾಂತ್ರಿಕ ವಿಶ್ವವಿದ್ಯಾಲಯದ ವಿಭಾಗಮಟ್ಟದ ಖೋ ಖೋ ಪಂದ್ಯಾವಳಿಯಲ್ಲಿ ಹುಬ್ಬಳ್ಳಿಯ ಕೆಎಲ್‌ಇ ಇಂಜಿನಿಯರಿಂಗ್ ಕಾಲೇಜು ತಂಡವು ಭರ್ಜರಿ ಜಯಗಳಿಸಿತು.

ಅಂತಿಮ ಪಂದ್ಯಾಟದಲ್ಲಿ ಹುಬ್ಬಳ್ಳಿಯ ಕೆಎಲ್‌ಇಐಟಿ ತಂಡವು ಲಕ್ಷೇಶ್ವರದ ಅಗಡಿ ಇಂಜಿನಿಯರಿಂಗ್ ಕಾಲೇಜಿನ ತಂಡದ ವಿರುದ್ಧ ಜಯ ಗಳಿಸಿತು.

ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಪ್ರಶಸ್ತಿಗಳನ್ನು ವಿತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕ್ರೀಡೆಯಲ್ಲಿ ಪಾಲ್ಗೊಳ್ಳುವ ಅವಕಾಶ ದೊರಕಿರುವ ಪ್ರತಿಯೊಬ್ಬರೂ ಕ್ರೀಡಾ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು. ಆಟದಲ್ಲಿ ಸೋಲು-ಗೆಲುವು ಸರ್ವೇಸಾಮಾನ್ಯ ಸಂಗತಿಯಾಗಿದೆ. ಎರಡನ್ನೂ ಸಹ ಸಮಭಾವದಿಂದ ಸ್ವೀಕರಿಸಿದಲ್ಲಿ ಉತ್ತಮ ಕ್ರೀಡಾಪಟುಗಳಾಗಲು ಸಾಧ್ಯ. ಕ್ರೀಡೆಯಲ್ಲಿ ಪ್ರತಿಯೊಬ್ಬರೂ ಭಾಗವಹಿಸುವದು ಮುಖ್ಯವಾಗಿದೆ. ಕ್ರೀಡೆಯಿಂದ ದೈಹಿಕ, ಮಾನಸಿಕ ಸದೃಢತೆ ಹೆಚ್ಚುತ್ತದೆ. ನಮ್ಮ ಅಗಡಿ ಕಾಲೇಜಿನಲ್ಲಿ ಈಗಾಗಲೇ ವಿಭಾಗ ಮಟ್ಟದ ತಾಂತ್ರಿಕ ವಿದ್ಯಾಲಯದ ಕಾಲೇಜುಗಳ ಅನೇಕ ಸ್ಪರ್ಧೆಗಳನ್ನು ಯಶಸ್ವಿಯಾಗಿ ನಡೆಸಿದೆ ಎಂದು ಹೇಳಿದರು.

ವಿಜೇತ ತಂಡ, ಮತ್ತು ರನ್ನರ್‌ಅಪ್ ತಂಡಗಳಿಗೆ ಪ್ರಶಸ್ತಿಪತ್ರ, ಟ್ರೋಫಿಗಳನ್ನು ನೀಡಲಾಯಿತು. ಕಾರ್ಯಕ್ರಮದಲ್ಲಿ ಪ್ರೊ. ಸುಭಾಷ ಮೇಟಿ, ಪ್ರೊ. ವಿಕ್ರಮ ಶಿರೋಳ, ಪ್ರೊ. ಆರ್. ಎಂ. ಪಾಟೀಲ, ಪ್ರೊ. ಎಸ್. ಎಫ್. ಕೊಡ್ಲಿ, ಪ್ರೊ. ಶ್ರೀಕಾಂತ ಪಾಟೀಲ, ಡಾ. ಎನ್.ಹಯವದನ, ಷಣ್ಮುಖ, ಲಕ್ಷ್ಮಣ ಪಾಟೀಲ, ರಮೇಶ ಕೊಪ್ಪರ, ಕಿರಣ ರೆಡ್ಡಿ, ರವಿ ಸದ್ಲಾಪೂರ ರಮೇಶ ರೆಡ್ಡಿ ಇದ್ದರು. ವಿವಿಧ ಕಾಲೇಜುಗಳ ನೂರಾರು ಕ್ರೀಡಾಪಟುಗಳು ಭಾಗವಹಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka